ಸಂಪುಟ 01 । ಸಂಚಿಕೆ 101 । ಗುರುವಾರ 26 ಫೆಬ್ರವರಿ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಸಂತ ಶಿಶುನಾಳ ಶರೀಫ್ ಮತ್ತು ಗುರು ಗೋವಿಂದ ಭಟ್ಟರ ಜಾತ್ರಾ ಮಹೋತ್ಸವ**

ಹಾವೇರಿ ಜಿಲ್ಲೆಯ ಶಿಶುನಾಳ ಗ್ರಾಮದಲ್ಲಿ ಪ್ರತಿವರ್ಷ ಅದ್ದೂರಿಯಾಗಿ ನಡೆಯುವ ಸಂತ ಶಿಶುನಾಳ ಶರೀಫ್ ಮತ್ತು ಗುರು ಗೋವಿಂದ ಭಟ್ಟರ ಜಾತ್ರಾ ಮಹೋತ್ಸವ ಮತ್ತು ರಥೋತ್ಸವವು ಕೋಮು ಸೌಹಾರ್ದತೆಗೆ ಹೆಸರುವಾಸಿಯಾಗಿದೆ. ಸಾವಿರಾರು ಭಕ್ತರು ಪಾಲ್ಗೊಳ್ಳುವ ಈ ಸಮಾರಂಭದಲ್ಲಿ, ಜಾತಿ-ಮತ ಬೇಧವಿಲ್ಲದೆ ಗುರು-ಶಿಷ್ಯರ ಸ್ಮರಣೆ ಮಾಡಲಾಗುತ್ತದೆ.

## ಸುಭಾಷಿತ

ಗೆದ್ದಾಗ ಅಹಂ ಪಟ್ಟವನು ಉಳಿಯಲಾರ....
ಸೋತಾಗ ಕುಸಿದು ಹೋದವನು ಬೆಳೆಯಲಾರ....
ಗೆಲುವಿನ ಸಂಭ್ರಮ ನೆತ್ತಿಗೆ ಹೇರದಿರಲಿ.... ಸೋಲಿನ ನೋವು ಮನಸ್ಸಿಗೆ ತಾಕದಿರಲಿ....

ಎಪಿಜೆ ಅಬ್ದುಲ್ ಕಲಾಂ

## ಕರ್ನಾಟಕ ಒನ್ ಫ್ರಾಂಚೈಸಿ ಕೇಂದ್ರ ಸ್ಥಾಪಿಸಲು ಅರ್ಜಿ ಆಹ್ವಾನ

**ನೈಜ್ಯ ದೇಸೆ ನ್ಯೂಸ್**

**ರಾಯಚೂರು: ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳನ್ನು ಒಂದೇ ಸೂರಿನಡಿ ಜನರಿಗೆ ಒದಗಿಸುವ ಉದ್ದೇಶದಿಂದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕರ್ನಾಟಕ ಒನ್ ಫ್ರಾಂಚೈಸಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ ಕರ್ನಾಟಕ ಒನ್ ಫ್ರಾಂಚೈಸಿ ಕೇಂದ್ರಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.**

ಜಿಲ್ಲೆಯ ಮಸ್ಕಿ ತಾಲೂಕಿನ ಬಳಗಾನೂರು ಪಟ್ಟಣ ಪಂಚಾಯತ್, ಮಸ್ಕಿ ಟಿಎಮ್‌ಸಿ, ಹಟ್ಟಿ ಪಟ್ಟಣ ಪಂಚಾಯತ್, ಲಿಂಗಸುಗೂರು ಟಿಎಮ್‌ಸಿಯಲ್ಲಿ ತಲಾ 1 ಕೇಂದ್ರ ಹಾಗೂ ರಾಯಚೂರು ನಗರ ಪಾಲಿಕೆ 2 ಕೇಂದ್ರಗಳು ಸೇರಿದಂತೆ ಒಟ್ಟು 7 ಕೇಂದ್ರಗಳನ್ನು ಸ್ಥಾಪಿಸಲು ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತರು ಆನ್‌ಲೈನ್‌ನಲ್ಲಿ: https://www.karnatakaone.gov.in/Public/FranchiseeTerms ನಲ್ಲಿ ಮಾಚ್ 2ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭರ್ತಿ ಮಾಡಿರುವ 40 ಸಾವಿರ ಹುದ್ದೆಗಳ ದಾಖಲೆ ಏಕೆ ಬಿಡುಗಡೆ ಮಾಡಿಲ್ಲ..? :ಬಿ.ವೈ.ವಿಜಯೇಂದ್ರ

**ಬೆಂಗಳೂರು: ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ 40 ಸಾವಿರ ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡಿರುವುದಾಗಿ ಹೇಳಿದೆ. ಇದರ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಗಳನ್ನು ಏಕೆ ಬಿಡುಗಡೆ ಮಾಡಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಶ್ನೆ ಮಾಡಿದ್ದಾರೆ.**

ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಸಿದ್ದರಾಮಯ್ಯ ಅವರು ನಮ ಪಕ್ಷ ಅಧಿಕಾರಕ್ಕೆ ಬಂದ ನಂತರ ವಿವಿಧ ಇಲಾಖೆಗಳಲ್ಲಿ ಖಾಲಿ ಉಳಿದಿದ್ದ 40 ಸಾವಿರ ಹುದ್ದೆಗಳನ್ನು ಭರ್ತಿ ಮಾಡಿದ್ದೇವೆ ಎಂದು ಹೇಳಿದ್ದಾರೆ. ಆದರೆ ದಾಖಲೆಗಳನ್ನು ಬಿಡುಗಡೆ ಮಾಡಲು ಮೀನಾಮೇಷ ಏಕೆ ಎಂದು ಪ್ರಶ್ನಿಸಿದರು. ಧಾರವಾಡದಲ್ಲಿ ಸಾವಿರಾರು ವಿದ್ಯಾರ್ಥಿಗಳು ಬೀದಿಗಿಳಿದು ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿರುವುದನ್ನು ಗಂಭೀರವಾಗಿ ಪರಿಗಣಿಸಬೇಕು. ಹಲವು ದಿನಗಳಿಂದ ಪ್ರತಿಭಟನೆಗಳು ನಡೆಯುತ್ತಲೇ ಇವೆ ಸರ್ಕಾರ ಕುಂಬಕರ್ಣ ನಿದ್ದೆಯಲ್ಲಿರುವುದ-ರಿಂದ ಇಂಥ ಸಮಸ್ಯೆಗಳು ಅವರ ಗಮನಕ್ಕೆ ಬಂದಿಲ್ಲ. ಅಲ್ಲದೆ ಅವರ ನಾಯಕರು ಕೂಡ ಮಾತನಾಡುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

ಚುನಾವಣೆಗೂ ಮುನ್ನ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಒಂದೇ ವರ್ಷದಲ್ಲಿ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡುವುದಾಗಿ ಯುವಜನತೆಗೆ ವಾಗ್ದಾನ ಕೊಟ್ಟು ಮತ ಪಡೆದರು. ಆದರೆ ಅಧಿಕಾರಕ್ಕೆ ಬಂದ ನಂತರ ಎಲ್ಲವನ್ನು ಮರೆತಿದ್ದಾರೆ. ಸಿಎಂ ಸಿದ್ದರಾಮಯ್ಯನವರನ್ನು ಬಿಟ್ಟು ಬಿಡಿ. ರಾಹುಲ್ ಗಾಂಧಿಗೂ ಇದು ಮರೆತು ಹೋಗಿರಬಹುದು ಎಂದು ವ್ಯಂಗ್ಯವಾಡಿದರು. ಸಿಎಂ ಕುರ್ಚಿ ಕಿತ್ತಾಟದಿಂದ ಇಂಥ ಸಮಸ್ಯೆಗಳಿಗೆ ಪರಿಹಾರ ಸಿಗುತ್ತಿಲ್ಲ. ಸಿದ್ದರಾಮಯ್ಯನವರು ನಮ ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಹೇಳಿದೆ. ಗಂಭೀರವಾಗಿ ಪರಿಗಣಿಸಲು ನಿಮಗೆ



ಇಷ್ಟು ದಿನ ಬೇಕಿತ್ತೇ? ಅಧಿಕಾರಕ್ಕೆ ಬಂದು ಇಷ್ಟು ದಿನವಾದರೂ ಯುವಕರ ಜೊತೆ ಮಾತನಾಡಲು ಸಮಯ ಸಿಕ್ಕಿಲ್ಲ. ಪ್ರತಿಯೊಂದಕ್ಕೂ ನಮ ಪಕ್ಷದ ಮೇಲೆ ಗೂಬೆ ಕೂರಿಸುತ್ತಿದ್ದೀರಿ ಎಂದು ಆರೋಪಿಸಿದರು.

24,300 ಹುದ್ದೆ ಭರ್ತಿ ಮಾಡಲು ನಾಲ್ಕೈದು ತಿಂಗಳ ಹಿಂದೆಯೇ ಭರ್ತಿ ಮಾಡಲು ಸರ್ಕಾರ ಕ್ಲಿಯರೆನ್ಸ್ ನೀಡಿದೆ. ಮೀಸಲಾತಿ ವಿಚಾರವಾಗಿ ಪ್ರಕರಣ ಇದೆ ಎಂದು ಹೇಳಿದ್ದಾರೆ. ಪ್ರಕರಣ ಇರುವುದು ಎಷ್ಟು ಸತ್ಯವೋ? ಹೆಚ್ಚುವರಿ ಇರುವ ಮೀಸಲಾತಿ ಬದಿಗಿಟ್ಟು ಉಳಿಕೆ ತುಂಬಿ ಎಂದು ಹೈಕೋರ್ಟ್ ಕೂಡ ಹೇಳಿದೆ. ಅದರ ಬಗ್ಗೆ ಅಫಿಡವಿಟ್ ಕೊಟ್ಟರೆ ಆಯಿತು ಎಂದರು. ಸಿಎಂ ವಾಸ್ತವವಾಗಿ ಸತ್ಯ ಒಪ್ಪಿಕೊಳ್ಳಬೇಕು. ರಾಜ್ಯದ ಜನರ ಕ್ಷಮೆ ಕೇಳಬೇಕು. ಐದು ಗ್ಯಾರಂಟಿಗಳ ಹೊರೆಯಾಗುತ್ತಿದೆ. ಅದನ್ನು ತೆಗೆಯಲು ಒಪ್ಪಿಕೊಳ್ಳುತ್ತಿಲ್ಲ. ಮೂರು ವರ್ಷಗಳಾಗುತ್ತಿದೆ. ಈಗಲೂ ಸುಳ್ಳು ಹೇಳುತ್ತಿದ್ದಾರೆ ಎಂದು ಆರೋಪಿಸಿದರು. ಆರೋಪ ಮಾಡೋದು ಬಿಟ್ಟು, ಪತ್ರಿಕಾ ಹೇಳಿಕೆ ನೀಡದೆ ನೇಮಕಾತಿ ಪ್ರಕ್ರಿಯೆ ಆರಂಭ ಮಾಡಬೇಕು. ಇಲ್ಲದೇ ಹೋದರೆ ಬಿಜೆಪಿ ಕೂಡ ಹೋರಾಟಕ್ಕೆ ಕರೆ ನೀಡಲಿದೆ ಎಂದು ಎಚ್ಚರಿಸಿದರು.

ಖಾಸಗಿ ಶಿಕ್ಷಣದ ಅನುದಾನಿತ ಶಾಲೆಗಳಲ್ಲಿ ಶಿಕ್ಷಕರ ಹುದ್ದೆ ಭರ್ತಿಗೆ 7-8-20204ರಂದೇ ನೇಮಕಾತಿಗೆ ಅನುಮತಿ ನೀಡಿದೆ. ಆ ಆದರೂ ಈವರೆಗೂ ನೇಮಕಾತಿ ಮಾಡಿಕೊಂಡಿಲ್ಲ. ಶಿಕ್ಷಣ ಕ್ಷೇತ್ರದಲ್ಲಿ 50 ಸಾವಿರ, ಆರೋಗ್ಯ ಕ್ಷೇತ್ರದಲ್ಲಿ 30 ಸಾವಿರ ಹುದ್ದೆಗಳು ಖಾಲಿ ಇದೆ. ಸತ್ಯವನ್ನು ಜನತೆ ಮುಂದಿಟ್ಟು, ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಿ ಎಂದು ಒತ್ತಾಯಿಸಿದರು. ರಾಜ್ಯದಲ್ಲಿ ಅನೇಕ ಸಮಸ್ಯೆಗಳು ನಮನ್ನು ಕಾಡುತ್ತಿವೆ. ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಇಚ್ಛಾ ಶಕ್ತಿ ರಾಜ್ಯ ಸರ್ಕಾರಕ್ಕೆ ಇಲ್ಲ. ಪರಿಹಾರ ಕಂಡುಕೊಳ್ಳುವ ಪ್ರಯತ್ನ ಕಾಂಗ್ರೆಸ್ ಮಾಡುತ್ತಿಲ್ಲ. ಕಾಂಗ್ರೆಸ್‌ನ ಈ ಧೋರಣೆ ಜನರಿಗೆ ಆತಂಕದಲ್ಲಿದ್ದಾರೆ ಎಂದರು.

ಯಾವುದೇ ಸಮಸ್ಯೆ ಬಂದರೂ ಕೇಂದ್ರ ಸರ್ಕಾರದ ಮೇಲೆ ಹಾಕುವುದು ತಮ ಜವಾಬ್ದಾರಿಯಿಂದ ನುಳುಚಿಕೊಳ್ಳುವ ಷಡ್ಯಂತ್ರ ಮಾಡಿಕೊಂಡು. ಸುಳ್ಳು ಹೇಳುವುದೇ ಕಾಂಗ್ರೆಸ್ ಕೆಲಸ ಆಗಿದೆ.. ಸುಳ್ಳೆ ಕಾಂಗ್ರೆಸ್ ಮನೆ ದೇವರು ಆಗಿದೆ. ಸಿಎಂ ಅವರೇ ಸುಳ್ಳಾಟ ಕಳ್ಳಾಟ ನಿಲ್ಲಿಸಿ ಸಮಸ್ಯೆಗಳಿಗೆ ಪರಿಹಾರ ನೀಡಿ ಎಂದು ಆಗ್ರಹಿಸಿದರು. ಮೊದಲಿಗೆ ಆಸ್ಪತ್ರೆಗಳ ಪರಿಸ್ಥಿತಿ ಸರಿ ಇಲ್ಲ.. ಔಷಧಿಗಳು ಸಿಗುತ್ತಿಲ್ಲ. ವೈದ್ಯರು ಪ್ರತಿಭಟನೆ ಮಾಡುತ್ತಿದ್ದಾರೆ. ಇವರ ಬೇಜಾಬ್ದಾರಿಯಿಂದ ಆರೋಗ್ಯ ಇಲಾಖೆ ನಷ್ಟದಲ್ಲಿದೆ. ಕೇಂದ್ರದ ಜನೌಷಧಿಯನ್ನು ಕೇಂದ್ರವನ್ನ ಮುಚ್ಚುವ ಕೆಲಸ ಮಾಡಿದರು.


ಖಾಸಗಿ ಫಾರ್ಮಾಸಿಗಳಲ್ಲಿ ಔಷಧಿ ತೆಗೆದುಕೊಳ್ಳಿ ಎಂದು ಸರ್ಕಾರ ವೈದ್ಯರೇ ಹೇಳುತ್ತಿದ್ದಾರೆ. ಸಿಟಿ ಸ್ಕ್ಯಾನ್, ಎಂಆರ್‌ಐ ಸ್ಕ್ಯಾನ್ ಸೇವೆಗಳಿಗೆ ಬಾಕೀ ಹಣ ಉಳಿಸಿಕೊಂಡಿದ್ದಾರೆ. ಇದರಿಂದ ಬಡ ರೋಗಿಗಳಿಗೆ ಸಮಸ್ಯೆಯಾಗುತ್ತಿದೆ. ಸಾಧನ ಸಮಾವೇಶ ಮಾಡುತ್ತಿದ್ದಾರೆ. ಆದರೆ ಜನರು ಯಾವ ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ಸರ್ಕಾರಕ್ಕೆ ಗೊತ್ತಾ? ಎಂದು ಪ್ರಶ್ನೆ ಮಾಡಿದರು. ನನ್ನ ಪ್ರಕಾರ ಕಾಂಗ್ರೆಸ್ ನುಡಿದಂತೆ ನಡೆಯುತ್ತಿರುವ ಸರ್ಕಾರ ಅಲ್ಲ. ಜನರಿಗೆ ಇರುವ ಸರ್ಕಾರ ಅಲ್ಲ.. ದಲ್ಲಾಳಿಗಳಿಗೆ ಇರುವ ಸರ್ಕಾರ. ಔಷಧಿ ಕೊರತೆ ಉಂಟಾಗಲು ಸರ್ಕಾರ ಸಚಿವರು ಕಾರಣ. ಪ್ರಭಾವಿಗಳ ಒತ್ತಡಕ್ಕೆ ಮಣಿದು ಔಷಧಿ ಖರೀದಿಯಲ್ಲಿ ಅವ್ಯಾವಾಹರ ನಡೆಯುತ್ತಿದೆ.

ಟೆಂಡರ್ ಕರೆದರೂ ಯಾರು ಭಾಗಿಯಾಗ್ತಿಲ್ಲ. ನಾನು ನೇರವಾಗಿ ಆರೋಪ ಮಾಡ್ತಿದ್ದೀನಿ.. 15-20% ಕಮಿಷನ್ ಹಾವಳಿಯಿಂದ ಟೆಂಡರ್‌ನಲ್ಲಿ ಯಾರು ಭಾಗಿಯಾಗುತ್ತಿಲ್ಲ ಎಂದರು. ಉಗ್ರಾಣದಿಂದ ಔಷಧಿ ಖರೀದಿ ಸ್ಟಾಪ್ ಮಾಡಿ ಬಹಳ ದಿನಗಳು ಆಗಿವೆ. ತುಂಡು ಗುತ್ತಿಗೆ ಮೇಲೆ ಔಷಧಿ ಖರೀದಿ ಮಾಡ್ತಿದ್ದಾರೆ.. ಇದರಿಂದ ಔಷದಿ ಕೊರತೆಗೆ ಕಾರಣ ಆಗಿದೆ. ಮಂಗಳೂರಿನ ಒಬ್ಬ ವ್ಯಕ್ತಿ ಇಡೀ ಆಸ್ಪತ್ರೆಗಳಿಗೆ ಔಷಧಿ ಸರಬರಾಜು ಮಾಡುತ್ತಿದ್ದಾರೆ. ಮಂಗಳೂರು ವ್ಯಕ್ತಿಯ ಪ್ರಭಾವದಿಂದ ಇಡೀ ವ್ಯವಸ್ಥೆ ಕುಸಿದು ಬಿಂದಿದೆ. ಇದರಿಂದ ಬಡವರು ಪರದಾಡುತ್ತಿದ್ದಾರೆ ಎಂದು ವಿಷಾದಿಸಿದರು.

# ಎಐಸಿಸಿ ಅಧ್ಯಕ್ಷರನ್ನು ಭೇಟಿಯಾದ ಸಂಸದ ಜಿ ಕುಮಾರ ನಾಯಕ.

**ನೈಜ್ಯ ದೇಸೆ ನ್ಯೂಸ್**

**ನಿನ್ನೆ ಮತ್ತು ಇಂದು ನವದೆಹಲಿಯಲ್ಲಿ ಸಂಸತ್ತಿನ ಸ್ಥಾಯಿ ಸಮಿತಿಯ ಕೇಂದ್ರದ ಬಜೆಟ್ ಬೇಡಿಕೆಯ ಕುರಿತು ಚರ್ಚೆಯನ್ನು ಏರ್ಪಡಿಸಲಾಗಿದ್ದು, ನಿನ್ನೆ ಸಂಜೆ ಚರ್ಚೆಯ ನಂತರ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಖರ್ಗೆ ರವರನ್ನು ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಜಿ ಕುಮಾರ ನಾಯಕರವರು ಸೌಹಾರ್ದತೆಯಿಂದ**



ಭೇಟಿಯಾಗಿ ಪುಷ್ಪಗುಚ್ಛವನ್ನು ನೀಡಿದರು.

ಭೇಟಿಯ ಸಂದರ್ಭದಲ್ಲಿ ಮಾನ್ಯ ಖರ್ಗೆ ರವರು ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಯೋಜನೆಗಳಾದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ರಸ್ತೆಗಳ ಕುರಿತು ಹಾಗೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗಗಳಿಂದ ಅನ್ಯ ರಾಜ್ಯಗಳಿಗೆ ಹಾದು ಹೋಗುತ್ತಿರುವ ರೈಲ್ವೇ ಸಂಪರ್ಕದ ಕುರಿತು ಸಂಸದರೊಡನೆ ಚರ್ಚಿಸಿದರು. ಜೊತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಕಾರದಿಂದ ಈ ಯೋಜನೆಗಳನ್ನು ವೇಗವಾಗಿ ಜಾರಿಗೆ ತರುವ ಅಗತ್ಯತೆಯನ್ನು ವಿವರವಾಗಿ ಸಂಸದ ಕುಮಾರ ನಾಯಕರಿಗೆ ಮನವರಿಕೆ ಮಾಡಿದರು.

ನಿನ್ನೆ ಬಿಡುವಿಲ್ಲದ ಚಟುವಟಿ-ಕೆಯ ದಿನದಂದು ಸಂಜೆಯಲ್ಲಿ ಕೂಡ ಮಾನ್ಯ ಮಲ್ಲಿಕಾರ್ಜುನ ಖರ್ಗೆ ಜಿ ಅವರು ಕಲ್ಯಾಣ ಕರ್ನಾಟಕದ ಭಾಗದ ಅಭಿವೃದ್ಧಿಯ ಬಗ್ಗೆ ಹಾಗೂ ಪಕ್ಷ ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಚರ್ಚಿಸಿದ್ದು ನಮ್ಮೆಲ್ಲರ ಮನೋಬಲ ಹೆಚ್ಚಿಸುವುದಲ್ಲದೆ ಸಕ್ರಿಯವಾಗಿ ಕೆಲಸಮಾಡಲು ಪ್ರೇರಣೆ ನೀಡುತ್ತದೆ ಎಂದು ಸಂಸದರು ತಿಳಿಸಿದರು.

# ಹೊಸೂರು ಮತ್ತು ಸಿದ್ದಾಪುರ ಗ್ರಾಮದಲ್ಲಿ ಅಕಾಲಿಕ ಮಳೆ ಹಾಗೂ ಬಿರುಗಾಳಿಯಿಂದ ರೈತರ ಬೆಳೆಗಳಿಗೆ ಭಾರೀ ಹಾನಿ

**ನೈಜ್ಯ ದೇಸೆ ನ್ಯೂಸ್**

**ಜಾಲಹಳ್ಳಿ: ಫೆ 25 ಬೆಳಿಗ್ಗೆ ಸುರಿದ ಅಕಾಲಿಕ ಮಳೆ ಮತ್ತು ಗಾಳಿಯಿಂದ ಹೊಸೂರು ಸಿದ್ದಾಪುರ ಗ್ರಾಮದ ರೈತ ಕೃಷ್ಣ ಯಾದವ್ ಅವರ ಸರ್ವೆ ನಂ. 83 ರಲ್ಲಿರುವ 7 ಎಕರೆ ಜಮೀನಿನ ಸಜ್ಜೆ ಬೆಳೆ ಸಂಪೂರ್ಣವಾಗಿ ನೆಲಕ್ಕುರುಳಿ ನಾಶವಾಗಿದೆ.**

ಜಾಲಹಳ್ಳಿ ಹಾಗೂ ಹೊಸೂರು ಸಿದ್ದಾಪುರ ಗ್ರಾಮಗಳಲ್ಲಿ ಅಕಾಲಿಕ ಮಳೆ ಮತ್ತು ಗಾಳಿಯ ಪರಿಣಾಮವಾಗಿ ಸಜ್ಜೆ



ಬೆಳೆ ಸಂಪೂರ್ಣವಾಗಿ ಮಲಗಿಕೊಂಡು ಹಾನಿಗೊಂಡಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಕಂದಾಯ ಇಲಾಖೆ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಹಾನಿಗೊಳಗಾದ ಬೆಳೆಗಳ ಸರ್ವೆ ನಡೆಸಿ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಬೇಕು ಎಂದು ರೈತ ಕೃಷ್ಣ ಯಾದವ್ ಅವರು ವರದಿಗಾರರೊಂದಿಗೆ ಮಾತನಾಡಿ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ರೈತರು ಸಂಕಷ್ಟದಲ್ಲಿದ್ದು, ತುರ್ತು ಕ್ರಮ ಕೈಗೊಳ್ಳುವಂತೆ ಗ್ರಾಮಸ್ಥರು ಮನವಿ ಮಾಡಿದ್ದಾರೆ. ವರದಿ:

# ಮಾದಕ ವ್ಯಸನಮುಕ್ತ ಸಮಾಜಕ್ಕೆ ಯುವಜನತೆ ಸಂಕಲ್ಪ ಮಾಡಲಿ: ಡಿವೈಎಸ್‌ಪಿ ಚಂದ್ರಶೇಖರ ಜಿ ನಾಯಕ

**ನೈಜ್ಯ ದೇಸೆ ನ್ಯೂಸ್**

**ಕವಿತಾಳ: ಮಾದಕ ವಸ್ತುಗಳ ಸೇವನೆಯು ಕೇವಲ ವ್ಯಕ್ತಿಯ ಆರೋಗ್ಯವನ್ನಷ್ಟೇ ಅಲ್ಲದೆ, ಇಡೀ ಕುಟುಂಬ ಮತ್ತು ಸುಂದರ ಭವಿಷ್ಯವನ್ನೇ ನಾಶಪಡಿಸುತ್ತದೆ. ಯುವಜನತೆ ಇಂತಹ ದುಶ್ಚಟಗಳಿಂದ ದೂರವಿದ್ದು, ಸಮಾಜದ ಉತ್ತಮ ಪ್ರಜೆಗಳಾಗಬೇಕು ಎಂದು ಡಿವೈಎಸ್‌ಪಿ ಚಂದ್ರಶೇಖರ ಜಿ ನಾಯಕ ಹೇಳಿದರು.**

ಇಲ್ಲಿನ ಕರ್ನಾಟಕ ಪಬ್ಲಿಕ್



ಶಾಲೆಯ (KPS) ಬಾಲಕರ ಪ್ರೌಢಶಾಲಾ ವಿಭಾಗದಲ್ಲಿ ಸೋಮವಾರ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಮಾದಕ ವಸ್ತುಗಳ ತಡೆಗಟ್ಟುವಿಕೆ ಕುರಿತು ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಾಗೃತಿ ಅತ್ಯಗತ್ಯ: ಇತ್ತೀಚಿನ ದಿನಗಳಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳನ್ನು ಗು-ರಿಯಾಗಿಸಿಕೊಂಡು ಮಾದಕ ವಸ್ತುಗಳ ಜಾಲ ಹರಡುತ್ತಿರುವುದು ಆತಂಕಕಾರಿ ವಿಷಯ. ಈ ಬಗ್ಗೆ ವಿದ್ಯಾರ್ಥಿಗಳು ಎಚ್ಚರದಿಂದ ಇರಬೇಕು. ಯಾವುದೇ ಅಪರಿಚಿತರು ನೀಡುವ ವಸ್ತುಗಳನ್ನು ಸ್ವೀಕರಿಸಬಾರದು ಹಾಗೂ ಇಂತಹ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣ ಪೋಷಕರಿಗೆ ಅಥವಾ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

# ಅನುಮತಿ ಇಲ್ಲದೆ ರೈಸ್ ಮಿಲ್ ಸ್ಥಾಪನೆಗೆ ಮುಂದಾದ ಮಾಲೀಕರ ವಿರುದ್ಧ ಮಲ್ಲಾಪುರ ಗ್ರಾಮಸ್ಥರು ಆರೋಪ

**ನೈಜ್ಯ ದೇಸೆ ನ್ಯೂಸ್**

**ತಾಲೂಕಿನ ಬೂತಲದಿನ್ನಿ ಗ್ರಾಮ ಪಂಚಾಯತಿಯ ವ್ಯಾಪ್ತಿಗೆ ಒಳಪಡುವ ಮಲ್ಲಾಪುರ ಗ್ರಾಮದ ಸರ್ವೆ ನಂ-65।1 ಮತ್ತು 65।9।2 ಸರ್ವೆ ನಂ-ಹೊಲಗಳಲ್ಲಿ ರೈಸ್ ಮಿಲ್ ಸೇರಿದಂತೆ ಇನ್ನಿತರೆ ಮಿಲ್ ಗಳನ್ನು ಸ್ಥಾಪಿಸಲು ಹೊರಟಿದ್ದಾರೆ. ಇದನ್ನು ಸಂಪೂರ್ಣವಾಗಿ ನಿಲ್ಲಿಸುವಂತೆ ಕೋರಿ ಗ್ರಾಮಸ್ಥರು ಮಾಜಿ ಸಂಸದ ಕೆ.ವಿರುಪಾಕ್ಷಪ್ಪ ಅವರಿಗೆ ತಕರಾರು ಅರ್ಜಿ ಮನವಿ ಸಲ್ಲಿಸಿದರು.**

ಮನವಿ ಸಲ್ಲಿಸಿ ಮಾತನಾಡಿದ ಗ್ರಾಮಸ್ಥರು, ನಾವು ಮಲ್ಲಾಪುರ ಗ್ರಾಮದ ನಿವಾಸಿಗರು, ನಮ್ಮ ಜಮೀನು ಭೂ ಪರಿವರ್ತಿತ ಜಮೀನು ಸರ್ವೆ ನಂ-65/9/1 ವಿಸ್ತೀರ್ಣ 2 ಎಕರೆ ಮತ್ತು ಸರ್ವೆ ನಂ-65/*/2 ವಿಸ್ತೀರ್ಣ



1.30 ಎಕರೆ ಜಮೀನುಗಳ ಪಕ್ಕದಲ್ಲಿ ಮನೆಗಳನ್ನು ಕಟ್ಟಿಸಿಕೊಂಡು ಜೀವನ ನಡೆಸುತ್ತಿದ್ದೇವೆ. ಭೂಪರಿವರ್ತಿತ ಜಮೀನುಗಳ ಮಾಲೀಕರು ಪಕ್ಕದಲ್ಲಿರುವ ನಮ್ಮ ಗಮನಕ್ಕೂ ತರದೆ ಸದರಿ ಜಮೀನುಗಳು ಎಲ್ಲಾ ಒಕ್ಕಲುತನಕ್ಕಾಗಿ ಇರುವ ಜಮೀನನ್ನು ರೈಸ್ ಮಿಲ್ ಸ್ಥಾಪಿಸುವ ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡಿಸಿದ್ದು, ಕಾನೂನು ಬಾಹಿರವೆ ಆಗಿದೆ. ಏಕೆಂದರೆ ಜಮೀನಿನಲ್ಲಿ ನಮ್ಮ ಮನೆಗಳು ಇರುವುದ-ರಿಂದ ರೈಸ್ ಮಿಲ್ ನಿಂದ ಬರುವ ಧೂಳಿನಿಂದ ನಾವು ನೆಮ್ಮದಿಯ ಜೀವನವನ್ನು ಕಳೆದುಕೊಳ್ಳುವ ಜೊತೆಗೆ ಪಕ್ಕದಲ್ಲೇ ವಾಸಿಸಲು ಆಗುವುದಿಲ್ಲ.

ಭೂ ಪರಿವರ್ತಿತ ಜಮೀನುಗಳ ಮಾಲೀಕರು ಸದರಿ ಭೂ ಪರಿವರ್ತಿತ ಜಮೀನುಗಳಲ್ಲಿ ರೈಸ್ ಮಿಲ್ ಸ್ಥಾಪಿಸುವ ಉದ್ದೇಶದಿಂದ ಆ ಸ್ಥಳದಲ್ಲಿ ಕಚ್ಚಾ ಸಾಮಾಗ್ರಿಗಳನ್ನು ಈಗ ಶೇಖರಣೆ ಮಾಡುತ್ತಿದ್ದಾರೆ. ಜೊತೆಗೆ ಸಂಬಂಧಪಟ್ಟ ಇಲಾಖೆ ಮತ್ತು ನಗರ ಯೋಜನಾ ಪ್ರಾಧಿಕಾರದಿಂದ ಅನುಮೋದನೆ ಸಹ ಪಡೆದುಕೊಂಡಿಲ್ಲ. ಈ ಕಾರಣದಿಂದಾಗಿ ಭೂ ಪರಿವರ್ತಿತ ಜಮೀನುಗಳಲ್ಲಿ ಎಸ್‌ಎಸ್‌ಎಮ್ ರೈಸ್ ಇಂಡಸ್ಟ್ರೀಸ್ ಎಲ್‌ಎಲ್‌ಪಿ ಇದರ ಜಂಟಿ ಪಾಲುದಾರರಾದ ಶರಣಬಸವರಾಜ ತಂದೆ ಶರಣಪ್ಪಗೌಡ, ಎಮ್. ರೆಡ್ಡಿ ತಂದೆ ಡಾ.ಆರ್.ಮಹಬಲೇಶ್ವರರೆಡ್ಡಿ ಮತ್ತು ಸರ್ವಮಂಗಳ ಅಬಲೂರು ಗಂಡ ಶಿವಪ್ರಸಾದ ಅಬಲೂರು, ಶರಣಬಸವ ತಂದೆ ಸಿದ್ದಲಿಂಗಪ್ಪ ಇವ-ರಿಗೆ ಭೂ ಪರಿವರ್ತಿತ ಜಮೀನುಗಳಲ್ಲಿ ಯಾವುದೇ ರೈಸ್ ನಿರ್ಮಾಣ ಮಾಡದಂತೆ ತಡೆ ಹಿಡಿದು, ನಮ್ಮ ಹಿತ ಕಾಪಾಡಬೇಕೆಂದು ವಿನಂತಿ ಮಾಡಿಕೊಂಡರು.

ಒಂದುವೇಳೆ ನಮ್ಮ ತಕರಾರು ಅರ್ಜಿ ಪರಿಗಣನೆಗೆ ತೆಗೆದುಕೊಳ್ಳದೆ ಅನುಮತಿ ನೀಡಿದರೆ, ನಮ್ಮ ಶಾಂತತೆಗೆ ಭಂಗ ಉಂಟುಮಾಡಿದರೆ ಗಲಾಟೆಯಾಗಿ ಏನಾದರೂ ಹೆಚ್ಚುಕಮ್ಮಿಯಾದರೆ, ಇದಕ್ಕೆ ನೇರ ರೈಸ್ ಮಿಲ್ ಸ್ಥಾಪಿಸುವ ಮಾಲೀಕರೆ ಕಾರಣರಾಗುತ್ತಾರೆಂದು ಎಚ್ಚರಿಸಿದರು. ಈ ವೇಳೆ: ಸಿದ್ದನಗೌಡ, ಯಂಕಪ್ಪ, ಈರಮ್ಮ, ಚನ್ನಪ್ಪ, ವೆಂಕೋಬ, ಅಂಬಣ್ಣ, ಮಲ್ಲಪ್ಪ, ನಾಗರಾಜ, ರಾಜಮ್ಮ, ರಡ್ಡೆಪ್ಪ, ರಮೇಶ, ದುಗ್ಗಪ್ಪ, ಸೇರಿದಂತೆ ಅನೇಕರಿದ್ದರು.

## ಸಾಹಿತ್ಯ ಸಿಂಚನ

ಗುರು–ಶಿಷ್ಯರ ಬಾಂಧವ್ಯ
ಗುರು ಎಂದರೆ ಜ್ಞಾನ ದೀಪ,
ಅಜ್ಞಾನ ಕತ್ತಲಿಗೆ ಬೆಳಕು.

ಜೀವನ ಮಾರ್ಗದ ದಾರಿದೀಪ,
ಸತ್ಯದ ಕಡೆಗೆ ಕರೆಸುವ ನಡೆಕು.
ಶಿಷ್ಯನು ಮಣ್ಣಿನ ಮೂರ್ತಿ,
ಗುರು ಕೈಯಲ್ಲಿ ರೂಪ ಪಡೆಯುವನು.

ಶ್ರಮ, ಶಿಸ್ತು, ಸದುಪದೇಶದಿಂದ,
ಸುವರ್ಣ ಭವಿಷ್ಯ ಕಟ್ಟುವನು.
ಗುರುವಿನ ಮಾತು ಗಂಗಾಜಲ,
ಮನದ ಮಲಿನತೆ ತೊಳೆಸುವುದು.

ಗುರುವಿನ ಕರುಣೆ ಚಂದ್ರಪ್ರಭೆ,
ಹೃದಯದಲ್ಲಿ ಶಾಂತಿ ಹರಡುವುದು.
ವಿದ್ಯೆ ಮಾತ್ರವಲ್ಲ ಜೀವನ ಪಾಠ,
ಗುರು ನೀಡುವ ಅಮೂಲ್ಯ ದಾನ.

ಶಿಷ್ಯನ ಯಶಸ್ಸೇ ಗುರುಗೌರವ,
ಇದು ಶಾಶ್ವತ ಸತ್ಯ ಸನಾತನ.
ಗುರು–ಶಿಷ್ಯರ ಈ ಪವಿತ್ರ ಬಂಧ,
ಭಾರತದ ಸಂಸ್ಕೃತಿಯ ಘನತೆ.
ನಮಿಸೋಣ ನಾವು ಆ ಮಹಾಗುರುಗಳೆಡೆ,
ಇದು ನಮ್ಮ ಕೃತಜ್ಞತೆ, ನಮ್ಮ ವಿನಮ್ರತೆ


**ಶಿವರಾಜ ಪಾಟೀಲ್**

# ಆಧ್ಯಾತ್ಮಿಕ ಒಲವು ಬೆಳೆಸಿಕೊಳ್ಳಿ: ಡಾ.ಪ್ರಭುಗೌಡ ಲಿಂಗದಳ್ಳಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಇವತ್ತು ನಮ್ಮ ಪೈಕಿ ಪ್ರತಿಯೊಬ್ಬರಲ್ಲಿ ಜೀವನಕ್ಕೆ ಅಗತ್ಯವಿರುವ ಎಲ್ಲ ಸವಲತ್ತುಗಳೂ ಇವೆ ಆದರೆ ಶಾಂತಿ ಮತ್ತು ನೆಮ್ಮದಿ ಎಂಬುದಿಲ್ಲ ಅದನ್ನು ಪಡೆದುಕೊಳ್ಳಲು ಜೀವನಕ್ಕೆ ಆಧ್ಯಾತ್ಮಿಕತೆ ಅಳವಡಿಸಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದು ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಹೇಳಿದರು.**

ತಾಲೂಕಿನ ನಾವದಗಿ ಗ್ರಾಮ ಬ್ರಹನ್ಮಠದ ಪೂಜ್ಯ ಷ.ಬ್ರ. ಶ್ರೀ ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯ ಮಹಾಸ್ವಾಮಿಗಳ ಗುರು ಪಟ್ಟಾಧಿಕಾರದ ದ್ವಿತೀಯ ವಾರ್ಷಿಕೋತ್ಸವ ನಿಮಿತ್ಯವಾಗಿ ಹಮ್ಮಿಕೊಂಡ ಮುತ್ತೈದೆಯರಿಗೆ ಉಡಿತೊಂಬವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪತಿ ಪತ್ನಿ ಸಂಸಾರ ಎಂಬ ರಥದ ಎರಡು ಚಕ್ರಗಳು ಅವು ಸರಿಯಾಗಿ ನಡೆದಾಗ ಮಾತ್ರ ಸಂಸಾರ ಸುಂದರವಾಗಲು ಸಾಧ್ಯ. ಮಕ್ಕಳಿಗೆ ಸಂಸ್ಕಾರ ನೀಡುವಲ್ಲಿ ತಾಯಂದಿರ ಪಾತ್ರ ಪ್ರಮುಖವಾಗಿದೆ. ಇವತ್ತು ಸಂಸ್ಕಾರಗಳ ಕೊರತೆಯಿಂದಾಗಿ ನಮ್ಮ ಯುವ ಜನತೆ



ವ್ಯಸನಿಗಳಾಗುತ್ತಿದ್ದಾರೆ, ಆರೋಗ್ಯ ಎಂಬುದು ಸರ್ವಶ್ರೇಷ್ಠ ಸಂಪತ್ತಾಗಿದೆ ಅದನ್ನು ಕಳೆದುಕೊಂಡು ಏನನ್ನೂ ಸಾಧಿಸಲು ಸಾಧ್ಯವಿಲ್ಲ ಎಲ್ಲರೂ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು.

ಶ್ರೀಮಠದ ಪರಮ ಪೂಜ್ಯರು ಈ ಭಾಗದಲ್ಲಿ ಧರ್ಮ ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡುತ್ತಿದ್ದಾರೆ ಅವರಿಗೆ ನಾವೆಲ್ಲರೂ ತನು–ಮನ ಧನದಿಂದ ಸಹಕರಿಸೋಣ ಎಂದರು. ಪೂಜ್ಯ ಶ್ರೀ ಶಂಕರಾನಂದ ಸ್ವಾಮಿಗಳು ತಮ್ಮ ಆಶೀರ್ವಚನದಲ್ಲಿ ಮುತ್ತೈದೆಯರಿಗೆ ಉಡಿ ತುಂಬುವುದು ಹಿಂದೂ ಸಂಸ್ಕೃತಿಯ ಪ್ರತೀಕವಾಗಿದೆ. ಉಡಿತುಂಬುವ ಕಾರ್ಯಕ್ರಮದಲ್ಲಿ ಶ್ರದ್ಧೆ ಭಕ್ತಿಯಿಂದ ಭಾಗವಹಿಸಿ.ನಾವದಗಿ ಪೂಜ್ಯರ ಧರ್ಮ ಸೇವೆ ಶ್ಲಾಘನೀಯವಾಗಿದೆ ಇದಕ್ಕೆ ನಿಮ್ಮ ಸಹಕಾರ ಇರಲಿ ಎಂದರು. ಇದೇ ಸಂದರ್ಭದಲ್ಲಿ ನಾವದಗಿ ಪೂಜ್ಯರಿಗೆ ಮಸ್ಕಿ ತಾಲೂಕಿನ ಸುರೇಶ ದಿನ್ನಿಬಾಯಿ ಕುಟುಂಬದ ಸದಸ್ಯರಿಂದ "ತುಲಾಭಾರ" ಹಾಗೂ ತಾಳಿಕೋಟಿ ಜಂಗಮ ಸಮಾಜದಿಂದ



ಗೌರವ ಸಮರ್ಪಣೆ ಸಲ್ಲಿಸಲಾಯಿತು.

ಸುಮಾರು 300 ಕ್ಕಿಂತಲೂ ಹೆಚ್ಚು ಮುತ್ತೈದೆಯರಿಗೆ ಶಾಸ್ತ್ರೋತ್ತರವಾಗಿ ಉಡಿ ತುಂಬಲಾಯಿತು. ಪೂಜ್ಯಷ.ಬ್ರ. ಶ್ರೀ ರಾಜ ಗುರುರಾಜೇಂದ್ರ ಒಡೆಯರ್ ಶಿವಾಚಾರ್ಯರು ಸಮ್ಮುಖ ವಹಿಸಿ ಆಶೀರ್ವಚನ ನೀಡಿದರು. ವೇದಿಕೆಯಲ್ಲಿ ಮಾತೋಶ್ರೀ ಶೋಭಾ ಅಮ್ಮನವರು,ರೇಣುಕಾ ಅಮ್ಮನವರು,ಡಾ. ಎಸ್.ಎಸ್.ದೇಸಾಯಿ,ಪುರಾಣಿಕ ರಾಚಯ್ಯ ಹಿರೇಮಠ,ಡಾ. ಸೋಮಶೇಖರಯ್ಯ ಹಿರೇಮಠ, ಸಾಹಿತಿ ಬಸವರಾಜ ಗೊರಜಿ ಇದ್ದರು. ಕಾರ್ಯಕ್ರಮದಲ್ಲಿ ಸಾವಿರಾರು ಭಕ್ತರು ಉಪಸ್ಥಿತರಿದ್ದರು.

# ಜಪ್ತಿ ಮಾಡಲಾದ ಆಹಾರ ಧಾನ್ಯಗಳ ಬಹಿರಂಗ ಹರಾಜು: ಜಿಲ್ಲಾಧಿಕಾರಿ ನಿತೀಶ್ ಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಸಗಟು ಗೋದಾಮುಗಳಲ್ಲಿ ವಿವಿಧ ಪ್ರಕರಣಗಳಲ್ಲಿ ಜಪ್ತಿ ಮಾಡಲಾದ ಆಹಾರ ಧಾನ್ಯಗಳನ್ನು ತಾಲ್ಲೂಕವಾರು ಫೆ. 26ರಿಂದ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುತ್ತಿದ್ದು, ಆಸಕ್ತರು ಭಾಗವಹಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕೋರಿದ್ದಾರೆ.**

ದೇವದುರ್ಗ ತಾಲೂಕಿನಲ್ಲಿ 258.96 ಕ್ವಿಂಟಾಲ್ ಅಕ್ಕಿ, ಲಿಂಗಸುಗೂರು ತಾಲೂಕಿನಲ್ಲಿ 216.00 ಕ್ವಿಂಟಾಲ್ ಅಕ್ಕಿ, ಮಾನವಿ ತಾಲೂಕಿನಲ್ಲಿ 88.20 ಕ್ವಿಂಟಾಲ್ ಅಕ್ಕಿ ಹಾಗೂ 22.50 ಕ್ವಿಂಟಾಲ್ ಜೋಳ, ರಾಯಚೂರು ತಾಲೂಕಿನಲ್ಲಿ 780.33 ಕ್ವಿಂಟಾಲ್ ಅಕ್ಕಿ ಹಾಗೂ 1.60 ಕ್ವಿಂಟಾಲ್ ಜೋಳ, ಸಿಂಧನೂರು ತಾಲೂಕಿನಲ್ಲಿ 1393.60 ಕ್ವಿಂಟಾಲ್ ಅಕ್ಕಿ ಹಾಗೂ 217.78 ಕ್ವಿಂಟಾಲ್ ಜೋಳ ಸೇರಿದಂತೆ ಒಟ್ಟು 2737.09 ಕ್ವಿಂಟಾಲ್ ಅಕ್ಕಿ ಹಾಗೂ 241.88 ಕ್ವಿಂಟಾಲ್ ಜೋಳ ಧಾನ್ಯಗಳನ್ನು ವಿವಿಧ ಪ್ರಕರಣಗಳಲ್ಲಿ ಜಪ್ತಿ ಮಾಡಲಾಗಿದೆ. ಆಹಾರ ಧಾನ್ಯಗಳು ಆಯಾ ತಾಲ್ಲೂಕಿನ ಕೆಎಫ್‌ಸಿಎಸ್‌ಸಿ ಸಗಟು ಮಳಿಗೆಗಳಲ್ಲಿ ಲಭ್ಯವಿದ್ದು, ಈ ದಾಸ್ತಾನನ್ನು ಎಲ್ಲಾ ತಾಲ್ಲೂಕುಗಳಲ್ಲಿ ಫೆ.26ರಂದು ಬಹಿರಂಗ ಹರಾಜನ್ನು ನಿಗದಿಪಡಿಸಲಾಗಿದೆ.

ಷರತ್ತುಗಳು: ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎಪಿಎಂಸಿ



ಪರವಾನಿಗೆದಾರರು ಅಥವಾ ಪರವಾನಿಗೆ ಪಡೆದ ಸಗಟು/ಚಿಲ್ಲರೆ ವ್ಯಾಪಾರಿಗಳು, ಕಮಿಷನ್ ಏಜೆಂಟರ್, ಅಕ್ಕಿ ಗಿರಣಿ ಮಾಲೀಕರು ಹಾಗೂ ದೊಡ್ಡ ಪ್ರಮಾಣದಾರ ಬಳಕೆದಾರ ಸಂಸ್ಥೆಗಳು ಆಗಿರಬೇಕು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಬಹಿರಂಗ ಹರಾಜು ದಿನ ಪೂರ್ವಾಹ್ನ 10 ಘಂಟೆಗೆ ಹರಾಜು ಸ್ಥಳದಲ್ಲಿ ಹಾಜರಾಗಿ ಹೆಸರನ್ನು ನೋಂದಾಯಿಸುವುದು ಹಾಗೂ ರೂ. 20,000/– (ಇಪತ್ತು ಸಾವಿರ) ಇ.ಎಂ.ಡಿ ಮೊತ್ತವನ್ನು ಮುಂಗಡವಾಗಿ ಪಾವತಿಸಬೇಕು. ಇ.ಎಂ.ಡಿ ಮೊತ್ತವನ್ನು ಜಿಲ್ಲಾಧಿಕಾರಿಗಳು ರಾಯಚೂರುರವರ ಹೆಸರಿನಲ್ಲಿ ಡಿಡಿ ಮೂಲಕ ಪಾವತಿಸತಕ್ಕದ್ದು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎರಡು ಪಾಸ್ ಪೋರ್ಟ್ ಸೈಜ್ ಭಾವಚಿತ್ರ, ಪರವಾನಿಗೆ ತಮ್ಮ ವ್ಯಾಪಾರಿ ನೋಂದಣಿ ಪತ್ರ/ಸಂಸ್ಥೆ ನೋಂದಣಿ ಪತ್ರ, ಆದಾರ್ ಕಾರ್ಡಿನ ಪ್ರತಿಯನ್ನು ಹಾಜರುಪಡಿಸಿ ಹರಾಜಿನಲ್ಲಿ ಭಾಗವಹಿಸುವುದು.

ಹರಾಜು ಮುಗಿದ ನಂತರ ಠೇವಣಿ ಮೊತ್ತವನ್ನು ಗರಿಷ್ಟ ಹಾಗೂ ಎರಡನೇ ಗರಿಷ್ಟ ಬಿಡ್ಡುದಾರರನ್ನು ಹೊರತುಪಡಿಸಿ ಉಳಿದ ಬಿಡ್ಡುದಾರರಿಗೆ ಸ್ಥಳದಲ್ಲಿಯೇ ಹಿಂದಿರುಗಿಸಲಾಗುವುದು. ಗರಿಷ್ಟ ಬಿಡ್ಡುದಾರರು ನಿಗಧತ ಅವಧಿಯೊಳಗೆ ಪೂರ್ಣ ಹಣವನ್ನು ಪಾವತಿಸಲು ವಿಫಲವಾದಲ್ಲಿ ಠೇವಣಿ ಹಣವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ನಂತರ ಎರಡನೇ ಬಿಡ್ಡುದಾರರಿಗೆ ಅವಕಾಶ ಮಾಡಿಕೊಡಲಾಗುವುದು ಇವರಿಗೆ ಸಹ ಇದೇ ನಿಯಮ ಅನ್ವಯವಾಗುತ್ತದೆ. ಅಗತ್ಯ ವಸ್ತುಗಳ ಕಾಯ್ದೆಯಡಿಯಲ್ಲಿ ಪ್ರಕರಣಕ್ಕೆ ಒಳಗಾಗಿರುವ ವ್ಯಕ್ತಿ /ಸಂಸ್ಥೆಗಳು/ ವ್ಯಾಪಾರಿಗಳು/ಸಾರ್ವಜನಿಕ ವಿತರಣಾ ಪದ್ಧತಿ ವ್ಯವಸ್ಥೆಯಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವವರು ಹರಾಜಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಜಪ್ತಿ ಮಾಡಲಾದ ಆಹಾರ ಧಾನ್ಯಗಳನ್ನು ಎಲ್ಲಿದೆಯೋ ಅಲ್ಲಿ ಹಾಗೂ ಹೇಗಿವೆಯೋ ಹಾಗೆ ಷರತ್ತಿನಡಿ ಹರಾಜು ಮಾಡಲಾಗುತ್ತಿರುವುದರಿಂದ ಹರಾಜಿನಲ್ಲಿ ಭಾಗವಹಿಸುವವರು ಅದಕ್ಕೂ ಮುನ್ನ ತಾಲ್ಲೂಕಿನ ಸಗಟು ಗೋದಾಮುಗಳಿಗೆ ಪೂರ್ವಾಹ್ನ 10 ಘಂಟೆಗೆ ಭೇಟಿ ನೀಡಿ ಆಹಾರ ಧಾನ್ಯಗಳ ಗುಣಮಟ್ಟವನ್ನು ಪರಿಶೀಲನೆ ಮಾಡತಕ್ಕದ್ದು. ಬಹಿರಂಗ ಹರಾಜಿನಲ್ಲಿ ಬರುವ ಸ್ಪರ್ಧಾತ್ಮಕ ದರಗಳನ್ನು ಒಪ್ಪುವ ಅಥವಾ ತಿರಸ್ಕರಿಸುವ ಅಥವಾ ಈ ಹರಾಜವನ್ನು ರದ್ದುಪಡಿಸುವ ಅಧಿಕಾರವನ್ನು ಕಾಯ್ದಿರಿಸಲಾಗಿದೆ. ಆಯಾ ತಾಲ್ಲೂಕಿನ ತಹಶೀಲ್ದಾರರು, ಆಹಾರ ಸಿಬ್ಬಂದಿಯವರು ಮತ್ತು ಗೋದಾಮು ವ್ಯವಸ್ಥಾಪಕರು, ಕೆ. ಎಫ್.ಸಿ.ಎಸ್.ಸಿ ರವರ ಸಮಕ್ಷಮದಲ್ಲಿ ಬಹಿರಂಗ ಹರಾಜನ್ನು ಮಾಡಲಾಗುವುದು.

ಬಿಡ್‌ನಲ್ಲಿ ನಮೂದಾಗುವ ದರಗಳನ್ನು ಜಿಲ್ಲಾಧಿಕಾರಿಗಳು ಅನುಮೋದಿಸಿದ ನಂತರ ಬಿಡ್‌ನ ಒಟ್ಟು ಮೌಲ್ಯವನ್ನು ಸರ್ಕಾರದ ಲೆಕ್ಕ ಶಿರ್ಷಿಕೆಗೆ ನಿಗದಿತ ದಿನಾಂಕದೊಳಗಾಗಿ ಜಮಾ ಮಾಡಿ ಚಲನದ ಹರಾಜುಪಡಿಸಿದ ನಂತರ ಹರಾಜಾದ ಪದಾರ್ಥ ಎತ್ತುವಳಿಗೆ ಅವಕಾಶ ನೀಡಲಾಗುವುದು. ಎಪಿಎಂಸಿ ಸೆಸ್ ಮತ್ತು ಇತರೆ ಯಾವುದಾದರೂ ಶುಲ್ಕವನ್ನು ಸರ್ಕಾರಕ್ಕೆ ಕಟ್ಟಬೇಕಾದಲ್ಲಿ ಹರಾಜಿನಲ್ಲಿ ಆಯ್ಕೆಯಾದ ಬಿಡ್‌ದಾರರ ಪಾವತಿಸತಕ್ಕದ್ದು. ಬಹಿರಂಗ ಹರಾಜಾದ ಆಹಾರ ಧಾನ್ಯಗಳನ್ನು ತಮ್ಮ ಸ್ವಂತ ಖರ್ಚಿನಲ್ಲಿ ಆದೇಶ ನೀಡಿದ 3 ದಿನಗಳಲ್ಲಿ ತಾಲ್ಲೂಕಿನ ಸಗಟು ಗೋದಾಮುಗಳಿಂದ ಎತ್ತುವಳಿ ಮಾಡತಕ್ಕದ್ದು.

ಹೆಚ್ಚಿನ ಮಾಹಿತಿ ಅಥವಾ ಷರತ್ತುಗಳನ್ನು ಉಪ ನಿರ್ದೇಶಕರ ಕಚೇರಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ರಾಯಚೂರು, ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತ, ರಾಯಚೂರು ಮತ್ತು ಜಿಲ್ಲೆಯ ಎಲ್ಲಾ ತಹಶೀಲ್ದಾರರ ಕಚೇರಿಗಳಿಗೆ ಭೇಟಿ ನೀಡಿ ವಿವರಗಳನ್ನು ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂತರ್ ವಿಶ್ವವಿದ್ಯಾಲಯ ಮಹಿಳೆಯರ ಗುಡ್ಡಗಾಡು ಓಟ ಕ್ರೀಡಾಕೂಟಕ್ಕೆ ಡಿಗ್ರಿ ಕಾಲೇಜಿನ ಕು.ಪಾರ್ವತಿ ಆಯ್ಕೆ

ನೈಜ್ಯ ದೆಸೆ ನ್ಯೂಸ್

**ಫೆ.26 ರಿಂದ 28ರವರೆಗೆ ಮಂಗಳೂರು ವಿಶ್ವವಿದ್ಯಾಲಯ ಕರ್ನಾಟಕದಲ್ಲಿ ನಡೆಯುವ ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಮಹಿಳೆಯರು ಗುಡ್ಡ–ಗಾಡು ಓಟ ಕ್ರೀಡಾಕೂಟಕ್ಕೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ತಂಡಕ್ಕೆ ಆಯ್ಕೆಯಾದ ಸಿಂಧನೂರು ನಗರದ ಸರ್ಕಾರಿ ಮಹಾವಿದ್ಯಾಲಯದ ಬಿಎ 6ನೇ ಸೆಮಿಸ್ಟರ್ ವಿದ್ಯಾರ್ಥಿನಿ ಕು.ಪಾರ್ವತಿ ತಂದೆ ತಿಮ್ಮಯ್ಯ ಅವರು ಆಯ್ಕೆಯಾಗಿದ್ದಾರೆ.**



ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ತಂಡವನ್ನು ಪ್ರತಿನಿಧಿಸಿ, ಡಿಗ್ರಿ ಕಾಲೇಜಿಗೂ ಹಾಗೂ ತಾಲೂಕಿಗೂ ಕೀರ್ತಿ ತಂದಿದ್ದಾರೆ. ಇವರಿಗೆ ಕಾಲೇಜಿನ ಅಭಿವೃದ್ಧಿ ಸಮಿತಿಯ ಅಧ್ಯಕ್ಷರು, ಸದಸ್ಯರು, ಹಾಗೂ ಪ್ರಾಚಾರ್ಯರು, ಭೋದಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿ ಬಳಗದವರು ಹೃದಯಪೂರ್ವಕ ಅಭಿನಂದನೆಗಳು ಸಲ್ಲಿಸಿದ್ದಾರೆ. ಈ ಸಂದರ್ಭದಲ್ಲಿ: ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಪಾಂಡು, ಹಿರಿಯ ಪ್ರಾಧ್ಯಾಪಕರಾದ ಪ್ರೊ.ಪುಷ್ಪ, ಪತ್ರಾಂಕಿತ ವ್ಯವಸ್ಥಾಪಕರಾದ ಮೊಹಮ್ಮದ್ ಸಿದ್ದಿಕಿ, ಸಹಾಯಕ ಪ್ರಾಧ್ಯಾಪಕರಾದ ದಿವ್ಯ ಉಪನ್ಯಾಸಕರಾದ ರಾಜೇಶ ಎಂ, ದೈಹಿಕ ಶಿಕ್ಷಣ ವಿಭಾಗದ ಸಂಯೋಜಕ ಡಾಲವಕುಮಾರ, ದೈಹಿಕ ಶಿಕ್ಷಣ ನಿರ್ದೇಶಕ ಶಿವ.ಕೆ, ಇದ್ದರು.

## ಮದ್ಯಪಾನ ಸಂಯಮ ಮಂಡಳಿ ಇಂದು ಸಭೆ




ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮದ್ಯ ಮತ್ತು ಮಾದಕವಸ್ತುಗಳ ಸೇವನೆಯಿಂದ ಕುಟುಂಬ ಹಾಗೂ ಸಮಾಜದ ಮೇಲಾಗುವ ದುಷ್ಪರಿಣಾಮಗಳ ಬಗ್ಗೆ ಚರ್ಚಿಸಲು ಕರ್ನಾಟಕ ರಾಜ್ಯ ಮಧ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷರಾದ ಶರಣಪ್ಪ ಸಲಾದಪುರ ಅವರ ಅಧ್ಯಕ್ಷತೆಯಲ್ಲಿ ಫೆ.26ರ ಬೆಳಿಗ್ಗೆ 11ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಸಭೆಗೆ ಅಗತ್ಯ ಮಾಹಿತಿಯೊಂದಿಗೆ ಹಾಜರಾಗುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

# ಆರ್. ಬಸನಗೌಡ ತುರುವಿಹಾಳ್ ಅವರಿಂದ ವಿವಿಧ ಕಾಮಗಾರಿಗಳ ಭೂಮಿ ಪೂಜೆ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಸುಂಕನೂರು, ಚಿಕ್ಕ ಕಡಬೂರ್ ಹಾಗೂ ಕ್ಯಾತ್ನಟ್ಟಿ ಗ್ರಾಮಗಳಲ್ಲಿ ನಡೆದ ಸಿ.ಸಿ ರಸ್ತೆ ಕಾಮಗಾರಿಗಳ ಭೂಮಿ ಪೂಜೆ ಕಾರ್ಯಕ್ರಮವು ಭಕ್ತಿ, ಉತ್ಸಾಹ ಮತ್ತು ಜನಸ್ಪಂದನೆಯ ನಡುವೆ ಯಶಸ್ವಿಯಾಗಿ ನೆರವೇರಿತು.**

ಮಸ್ಕಿ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರು ಹಾಗೂ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮದ್ಯೋಗ ನಿಗಮ ಅಧ್ಯಕ್ಷ ಆರ್. ಬಸನಗೌಡ ತುರುವಿಹಾಳ್ ಅವರು ಪೂಜೆ ನೆರವೇರಿಸಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಈ ಸಂದರ್ಭ ಮಾತನಾಡಿದ ಅವರು,



ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಗುಣಮಟ್ಟದ ಮೂಲಸೌಕರ್ಯ ಅವಶ್ಯಕ ಎಂದು ತಿಳಿಸಿ, ರಸ್ತೆ ಅಭಿವೃದ್ಧಿಯಿಂದ ವಿದ್ಯಾರ್ಥಿಗಳು, ರೈತರು, ಮಹಿಳೆಯರು ಹಾಗೂ ವ್ಯಾಪಾರಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ ಎಂದು ಹೇಳಿದರು.

ಉತ್ತಮ ರಸ್ತೆ ಸಂಪರ್ಕದಿಂದ ಗ್ರಾಮಗಳ ಆರ್ಥಿಕ ಚಟುವಟಿಕೆಗಳಿಗೆ ವೇಗ ಸಿಗಲಿದ್ದು, ದಿನನಿತ್ಯದ ಸಂಚಾರ ಸುಗಮವಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ಮುಖಂಡರು, ಯುವ ಮುಖಂಡರು, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು. ಅಭಿವೃದ್ಧಿಯ ಹಾದಿಯಲ್ಲಿ ಗ್ರಾಮಗಳ ಉಜ್ವಲ ಭವಿಷ್ಯಕ್ಕಾಗಿ ಎಲ್ಲರ ಸಹಕಾರ ಅಗತ್ಯವೆಂದು ತಿಳಿಸಿದರು. ಜನಸೇವೆಯ ಸಂಕಲ್ಪದೊಂದಿಗೆ ಗ್ರಾಮಾಭಿವೃದ್ಧಿಯತ್ತ ಮತ್ತೊಂದು ಮಹತ್ವದ ಹೆಜ್ಜೆ ಇಡಲಾಗಿದೆ

# ರಸಗೊಬ್ಬರಗಳ ಅತಿಯಾದ ಬಳಕೆಯನ್ನು ಹಂತಹಂತವಾಗಿ ಕಡಿಮೆ ಮಾಡಿ: ಪತಂಗೆ ಜಯವಂತ್ ರಾವ್ ಸಲಹೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮಣ್ಣಿನ ಆರೋಗ್ಯ ಕಾಪಾಡಲು ಮತ್ತು ದೀರ್ಘಕಾಲೀನ ಉತ್ಪಾದಕತೆ ಸಾಧಿಸಲು ರಾಸಾಯನಿಕ ರಸಗೊಬ್ಬರಗಳ ಅತಿಯಾದ ಬಳಕೆಯನ್ನು ಹಂತಹಂತವಾಗಿ ಕಡಿಮೆ ಮಾಡಿ ಸಮತೋಲನಯುತ ಮತ್ತು ಪರಿಸರ ಸ್ನೇಹಿ ಕೃಷಿ ವಿಧಾನಗಳನ್ನು ಅಳವಡಿಸಿಕೊಳ್ಳಬೇಕು. ಶಾಶ್ವತ ಕೃಷಿ ಪದ್ಧತಿಗಳ ಅಗತ್ಯತೆಯನ್ನು ಅರಿಯಬೇಕು ಎಂದು ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಅಧ್ಯಕ್ಷರಾದ ಪತಂಗೆ ಜಯವಂತ್ ರಾವ್ ಅವರು ಹೇಳಿದರು.**

ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘ ನಿ.ರಾಯಚೂರಿನ ಸಭಾಂಗಣದಲ್ಲಿ ಫೆ.24ರಂದು ನಡೆದ ಭವ್ಯ ಅಧೀಕೃತ ಮಾರಾಟಗಾರ (ಡೀಲರ್ಸ್) ಸಮಾವೇಶದಲ್ಲಿ ಅವರು ಮಾತನಾಡಿದರು. ನಫೇಡ್ ನಿರ್ದೇಶಕರಾಗಿದ್ದ ವೇಳೆ ನಿರ್ವಹಿಸಿದ




ಕಾರ್ಯಗಳ ಬಗ್ಗೆ ಸ್ಮರಿಸಿದ ಅವರು, ಕಳೆದ ವರ್ಷ ಆರಂಭದಲ್ಲಿ ಯೂರಿಯಾ ಮತ್ತು ಡಿಎಪಿ ರಸಗೊಬ್ಬರಗಳ ತೀವ್ರ ಕೊರತೆಯಾಗಿತ್ತು. ರಾಯಚೂರು ಜಿಲ್ಲೆಯ ರೈತರಿಗೆ ಸಮರ್ಪಕ ಪ್ರಮಾಣದ ಯೂರಿಯಾ ಡಿ.ಎ.ಪಿ ಇತರೆ ರಸಗೊಬ್ಬರಗಳ ಸರಬರಾಜು ಆಗುವಂತೆ ಮಾಡಲು ಕೇಂದ್ರ ಸಚಿವರು ಹಾಗೂ ತಮ್ಮ ಸಹೋದ್ಯೋಗಿ ಮಿತ್ರರೊಂದಿಗೆ ನಿರಂತರ ಪ್ರಯತ್ನಿಸಿದ್ದರಿಂದಾಗಿ ಸಮರ್ಪಕ ಪ್ರಮಾಣದ ರಸಗೊಬ್ಬರವನ್ನು ಜಿಲ್ಲೆಗೆ ಪೂರೈಸಲು ಸಾಧ್ಯವಾಯಿತು ಎಂದು ಅವರು ಹೇಳಿದರು.

ಕೃಷಿ ಹಂಗಾಮಿನಲ್ಲಿ ರೈತರಿಗೆ ಯಾವುದೇ ತೊಂದರೆ ಆಗದಂತೆ ಈ ಹಿಂದ ಸಂಘಕ್ಕೆ ರಾಯಚೂರು–ಯಾದಗಿರಿ ಸಂಸದರಾದ ಜಿ.ಕುಮಾರ್ ನಾಯಕ್ ಮತ್ತು ಸ್ಥಳೀಯ ಕೃಷಿ ಇಲಾಖೆ ಅಧಿಕಾರಿಗಳ ಸಭೆಯನ್ನು ಕರೆದು ಸಮರ್ಪಕ ರಸಗೊಬ್ಬರ ಸರಬರಾಜು ದಾಸ್ತನು ಕ್ರಮ ಕೈಗೊಳ್ಳಲಾಗಿದೆ. ಇದನ್ನು ಈ ಮುಂದೆಯು ಕೂಡ ಅಳವಡಿಸಿ ಕೊಳ್ಳಲಾಗುವುದು. ಮುಂದಿನ ಕೃಷಿ ಹಂಗಾಮಿನಲ್ಲಿ ಸಮಯಕ್ಕೆ ಸರಿಯಾಗಿ ರಸಗೊಬ್ಬರ ಲಭ್ಯತೆಗೆ ಒತ್ತು ಕೊಡಲಾಗವುದು ಎಂದು ಅವರು ತಿಳಿಸಿದರು.

ಸಹಕಾರ ಸಂಘಗಳ ಉಪನಿಬಂಧಕರಾದ ಎಂ.ಆರ್.ಮನೋಹರ್ ಅವರು ಮಾತನಾಡಿ, ನಮ್ಮ ಸಹಕಾರ ಇಲಾಖೆಯ ಕೃಷಿಕ ಭಾರತಿ ಕೋ–ಆಪರೇಟೀವ್ ನಿಯಮಿತ (ಕ್ರೀಬ್ಕೋ) ಇಂದು ದೇಶದಲ್ಲಿ ಅತ್ಯಂತ ಹೆಚ್ಚಿನ ಪ್ರಮಾಣದ ರಸಗೊಬ್ಬರ ಉತ್ಪಾದಿಸುವ ಬೃಹತ್ ಕೈಗಾರಿಕೆಯಾಗಿ ಬೆಳೆದಿರುವುದು ಹೆಮ್ಮೆಯ ಸಂಗತಿಯಾಗಿದೆ. ರೈತರು ಮಣ್ಣಿನ ಪರೀಕ್ಷೆಗೆ ಗಮನ ಹರಿಸಬೇಕು. ವಲಯದ ಮಣ್ಣಿಗೆ ಅನುಗುಣವಾಗಿ ಗೊಬ್ಬರದ ಬಳಕೆಯಿಂದ ಬೆಳೆಯ ಆರೋಗ್ಯವನ್ನು ವೃದ್ಧಿಸುವ ಮತ್ತು ಹೆಚ್ಚು ಫಸಲು ಬರಲು ಸಹಕಾರಿಯಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕೃಷಕ ಭಾರತಿ ಕೋ–ಆಪರೇಟೀವ್ ನಿಯಮಿತ (ಕ್ರೀಬ್ಕೋ) ಅವರ ಉತ್ಪನ್ನಗಳ ಬಗ್ಗೆ ರೈತರು ಮತ್ತು ವಿತರಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಕೃಷಕ ಭಾರತಿ ಕೋ–ಆಪರೇಟೀವ್ ನಿಯಮಿತದ ರಾಯಚೂರು ಜಿಲ್ಲಾ ಸ್ಥಳೀಯ ಮಾರಾಟ ವ್ಯವಸ್ಥಾಪಕರಾದ ಶಶಿಕುಮಾರ ಅವರ ನೇತೃತ್ವದಲ್ಲಿ ನಡೆದ ಭವ್ಯ ಅಧೀಕೃತ ಮಾರಾಟಗಾರ (ಡೀಲರ್ಸ್) ಸಮಾವೇಶದಲ್ಲಿ ಇಫ್ಕೋ ರಾಯಚೂರು ಜಿಲ್ಲಾ ಸ್ಥಳೀಯ ಮಾರಾಟ ವ್ಯವಸ್ಥಾಪಕರಾದ ಸಚಿನ್, ಪ್ರಧಾನ ವ್ಯವಸ್ಥಾಪಕರಾದ ಬಂದಯ್ಯ ಸ್ವಾಮಿ, ಲೇಕಪಾಲಕರಾದ ನರಸಿಂಹಪ್ಪ, ಕ್ರೀಬ್ಕೋ ಮಾನ್ಯತೆ ಪಡೆದ ರಾಯಚೂರು ಜಿಲ್ಲೆಯ ರಸಗೊಬ್ಬರ ವಿತರಕರು, ಸುತ್ತಮುತ್ತಲಿನ ಪ್ರದೇಶಗಳ ಪ್ರಗತಿಪರ ರೈತರು ಹಾಗೂ ಗಣ್ಯರು ಭಾಗವಹಿಸಿದ್ದರು. ಕಂಪನಿ ಪ್ರತಿನಿಧಿಗಳು, ವಿತರಕರು ಮತ್ತು ರೈತರ ನಡುವಿನ ಸಂವಾದಕೆ ಕ್ರೀಬ್ಕೋ ಮಹತ್ವದ ವೇದಿಕೆ ನೀಡಿತು.

# ನೇಮಕಾತಿ ಪ್ರಕಟಣೆ

WCD ಕಲಬುರಗಿ ನೇಮಕಾತಿ 2026–412 ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಘಅಆ ಕಲಬುರಗಿ ನೇಮಕಾತಿ 2026: 412 ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲಬುರಗಿ ಫೆಬ್ರವರಿ 2026 ರ ಘಅಆ ಕಲಬುರಗಿ ಅಧಿಕೃತ ಅಧಿಸೂಚನೆಯ ಮೂಲಕ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕಲಬುರಗಿ ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 16–ಮಾರ್ಚ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 20–02–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16–ಮಾರ್ಚ್–2026 ಅಧಿಕೃತ ವೆಬ್‌ಸೈಟ್: karnemakaone.kar.nic.in

# ಅಗ್ನಿವೀರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ರಾಯಚೂರು ಜಿಲ್ಲೆಯ ಯುವಕರಿಗೆ ಸುವರ್ಣಾವಕಾಶ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಭಾರತೀಯ ಸೇನೆಯಲ್ಲಿನ ಅಗ್ನಿವೀರ್ ಸೇರಿದಂತೆ ವಿವಿಧ ಹುದ್ದೆಗಳನ್ನು ಸೇರಲು ಆಸಕ್ತಿಯಿರುವ ರಾಯಚೂರು ಸೇ–ರಿದಂತೆ ಕೊಪ್ಪಳ, ಯಾದಗಿರಿ, ಕಲಬುರಗಿ, ಬಳ್ಳಾರಿ, ವಿಜಯನಗರ ಹಾಗೂ ಬೀದರ ಜಿಲ್ಲೆಗಳ ಯುವಕರಿಗೆ ಅರ್ಜಿ ಸಲ್ಲಿಸಲು ಮಾರ್ಚ 1ರವರೆಗೆ ಅವಕಾಶ ಕಲ್ಪಿಸಲಾಗಿದೆ.**

ಆಸಕ್ತ ಯುವಕರು ಸೇನೆಯ ಅಧಿಕೃತ ವೆಬ್‌ಸೈಟ್ www.joinindianarmy.nic.in ಗೆ ಭೇಟಿ ನೀಡಿ ಅಲ್ಲಿ ಅಗ್ನಿಪಥ್ ಟ್ಯಾಬ್ ಕ್ಲಿಕ್ ಮಾಡಿ, ಆಧಾರ್ ಅಥವಾ 10ನೇ ತರಗತಿ ಸರ್ಟಿಫಿಕೇಟ್ ಬಳಸಿ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಅರ್ಜಿ ಶುಲ್ಕ 250 ರೂ. ನಿಗದಿಪಡಿಸಲಾಗಿದ್ದು, ಅಗ್ನಿವೀರ್ ಜನರಲ್ ಡ್ಯೂಟಿ ಹುದ್ದೆಗೆ ಅರ್ಜಿ ಸಲ್ಲಿಸಲು




10ನೇ ತರಗತಿಯಲ್ಲಿ ಕನಿಷ್ಠ ಶೇ.45 ರಷ್ಟು ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಅಗ್ನಿ ವೀರ್ ಟೆಕ್ನಿಕಲ್‌ಗೆ ಅರ್ಜಿ ಸಲ್ಲಿಸಲು ಪಿಯುಸಿ ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣ ಅಥವಾ 10ನೇ ತರಗತಿಯ ಜೊತೆಗೆ ಐಟಿಐ ಮುಗಿಸಿರಬೇಕು.

ಅಗ್ನಿವೀರ್ ಕ್ಲರ್ಕ್ ಹಾಗೂ ಸ್ಟೋರ್ ಕೀಪರ್ ಹುದ್ದೆಗಳಿಗೆ ಯಾವುದೇ ವಿಭಾಗದ ಪಿಯುಸಿಯಲ್ಲಿ ಕನಿಷ್ಠ ಶೇ.60 ಅಂಕಗಳನ್ನು ಪಡೆದಿರಬೇಕು. ಇಂಗ್ಲಿಷ್ ಮತ್ತು ಗಣಿತ ವಿಷಯ ಕಡ್ಡಾಯವಾಗಿರುತ್ತದೆ. ಅಗ್ನಿವೀರ್ ಟ್ರೇಡ್ಸ್ ಮ್ಯಾನ್ ಹುದ್ದೆಗೆ 8 ನೇ ಅಥವಾ 10ನೇ ತರಗತಿ ಉತ್ತೀರ್ಣರಾಗಿರಬೇಕು. ಎರಡು ಹಂತಗಳಲ್ಲಿ ಸಾಮರ್ಥ್ಯದ ಪರೀಕ್ಷೆ ನಡೆಯಲ್ಲಿದ್ದು ಮೊದಲಿಗೆ ಕಂಪ್ಯೂಟರ್ ಆಧಾರಿತ ಲಿಖಿತ ಪರೀಕ್ಷೆ ಇರುತ್ತದೆ. ಇದರಲ್ಲಿ ಉತ್ತೀರ್ಣರಾದವರಿಗೆ ಮುಂದಿನ ಹಂತಕ್ಕೆ ಅವಕಾಶವಿರುತ್ತದೆ. ಎರಡನೇ ಹಂತದಲ್ಲಿ ನೇಮಕಾತಿ ರ‍್ಯಾಲಿಯಲ್ಲಿ ದೈಹಿಕ ಪರೀಕ್ಷೆ ಇರುತ್ತದೆ. ಕ್ಲರ್ಕ್ ಹುದ್ದೆಗೆ ಟೈಪಿಂಗ್ ಟೆಸ್ಟ್ ಇರುತ್ತದೆ. ಮಾಜಿ ಸೈನಿಕರ ಮನವಿ: ಭಾರತೀಯ ಸೇನೆಯಿಂದ ಪ್ರಸ್ತುತ 25 ಸಾವಿರಕ್ಕೂ ಹೆಚ್ಚು ಅಗ್ನಿವೀರ ಹುದ್ದೆಗಳ ನೇಮಕಾತಿ ನಡೆಯುತ್ತಿದೆ.

ಈ ಬಾರಿಯ ನೇಮಕಾತಿಯಲ್ಲಿ 8ನೇ ತರಗತಿಯಿಂದ ಪಿಯುಸಿ ವರೆಗಿನ ನಾಲ್ಕು ವಿಭಾಗಗಳಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಭಾರತ ಸೇನೆಯಲ್ಲಿ ಆಯ್ಕೆಯಾದ ಅಗ್ನಿ ವೀರರಿಗೆ ಆಕರ್ಷಕ ವೇತನ ಮತ್ತು ಸವಲತ್ತುಗಳಿವೆ. ಸೇವಾ ನಿಧಿ ಪ್ಯಾಕೇಜ್ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9591208111ಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ರಾಯಚೂರು ಸೇ–ರಿದಂತೆ ಕೊಪ್ಪಳ, ಯಾದಗಿರಿ, ಕಲಬುರಗಿ, ಬಳ್ಳಾರಿ, ವಿಜಯನಗರ, ಬೀದರ ಜಿಲ್ಲೆಗಳ ಯುವಕರು ಭಾರತೀಯ ಸೇನೆ ನೀಡಿರುವ ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷರು ಹಾಗೂ ಮಾಜಿ ಯೋಧರಾದ ಚೆನ್ನಾರೆಡ್ಡಿ ಅವರು ರಾಯಚೂರು ಸೇರಿದಂತೆ ಬೇರೆ ಬೇರೆ ಜಿಲ್ಲೆಗಳ ಯುವಕರಲ್ಲಿ ಮನವಿ ಮಾಡಿದ್ದಾರೆ.

# ವಾರ್ಡ್‌ವಾರು ಮತದಾರರ ಪಟ್ಟಿ ಅವಧಿ ವಿಸ್ತರಣೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ವಾರ್ಡ್‌ವಾರು ಮತದಾರರ ಪಟ್ಟಿಯನ್ನು ತಯಾರಿಸುವ ಅವಧಿಯನ್ನು ವಿಸ್ತರಿಸಲಾಗಿದೆ. ಪರಿಷ್ಕೃತ ವೇಳಾಪಟ್ಟಿಯಂತೆ ಏಪ್ರಿಲ್ 6, 2026ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ ಎಂದು ಚುನಾವಣೆ ಅಯೋಗ ಹೇಳಿಕೆ ನೀಡಿದೆ.**




ರಾಜ್ಯ ಚುನಾವಣಾ ಆಯೋಗವು ಭಾರತ ಸಂವಿಧಾನದ ಪರಿಚ್ಛೇದ 243–ಚ ಹಾಗೂ ಗ್ರೇಟ–ರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಪ್ರಕಾರ, ಪ್ರಸ್ತುತ ಜಾರಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಆಧಾರವಾಗಿಟ್ಟು ಕೊಂಡು ವಾರ್ಡ್‌ವಾರು ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಈಗಾಗಲೇ ಸೂಚನೆ ನೀಡಿತ್ತು. ಅದರಂತೆ 01.10.2025ರ ಅರ್ಹತಾ ದಿನಾಂಕದವರೆಗಿನ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು 19.01.2026ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿ–ತ್ತು. ಪರಿಷ್ಕರಣೆ: ಕರಡು ಪಟ್ಟಿಗೆ ಸಂಬಂಧಿಸಿದಂತೆ ರಾಜಕೀಯ ಪಕ್ಷಗಳು ಹಾಗೂ ಸಾರ್ವಜನಿಕರಿಂದ ಹಲವಾರು ದೂರುಗಳು ಬಂದ ಹಿನ್ನೆಲೆ, ಗ್ರೇಟರ್ ಬೆಂಗಳೂರು ಆಡಳಿತ (ಮತದಾರರ ನೋಂದಣಿ) ನಿಯಮಗಳು, 2025ರ ನಿಯಮ 30ರನ್ವಯ ಪರಿಷ್ಕೃತ ಸುತ್ತೋಲೆ ಹೊರಡಿಸಲಾಗಿದೆ. ಭೌತಿಕ ಪರಿಶೀಲನೆ ವೇಳೆ ಕೆಲ ವಾರ್ಡ್‌ಗಳಲ್ಲಿ ಮತದಾರರ ವಿವರಗಳು ಅದಲು–ಬದಲು ಆಗಿರುವುದು, ಒಂದು ವಾರ್ಡ್‌ನ ನಿವಾಸಿಗಳು ಮತ್ತೊಂದು ವಾರ್ಡ್ ಪಟ್ಟಿಯಲ್ಲಿ ಸೇರಿರುವುದು ಹಾಗೂ ಮತಗಟ್ಟೆ ಕೊಠಡಿ ಸಂಖ್ಯೆಯಲ್ಲಿ ತಪ್ಪುಗಳಿರುವುದು ಪತ್ತೆಯಾಗಿದೆ. ಈ ಲೋಪದೋಷಗಳನ್ನು ಸರಿಪಡಿಸಲು ಪ್ರಕ್ರಿಯೆಗೆ ಅವಕಾಶ ನೀಡಲಾಗಿದೆ. ನಿಯಮ 19 ಮತ್ತು 20ರನ್ವಯ ಅಂತಿಮ ಪ್ರಕಟಣೆಗೆ ಮುನ್ನ ದೋಷ ತಿದ್ದುಪಡಿ ಮಾಡಲು ಅವಕಾಶವಿದ್ದು, 16.02.2026ರಿಂದ 20.02.2026ರವರೆಗೆ ಈಡಿಒಟ–To Matrix ಪ್ರಕ್ರಿಯೆ ನಡೆಸಲಾಗಿದೆ. ಪರಿಷ್ಕೃತ ವೇಳಾಪಟ್ಟಿ: ಇ–ಜನರೇಷನ್ 02–03–2026 ರಿಂದ 06–04–2026ಪರಿಷ್ಕೃತ ಕರಡು ಪಟ್ಟಿ ಪ್ರಕಟಣೆ ಅಗುತ್ತೆ ಎಂದು ಅಯೋಗ ಸ್ಪಷ್ಟಪಡಿಸಿದೆ..

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಶ್ರೀ ಬಸವೇಶ್ವರ ಜಾತ್ರೆ ಅಂಗವಾಗಿ ಎತ್ತುಗಳಿಂದ ಕಲ್ಲು ಎಳೆಯುವ ಸಾಂಕೇತಿಕ ಪೂಜೆ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ಇತ್ತೀಚಿನ ದಿನಮಾನಗಳಲ್ಲಿ ಆದ–ನಿಕ ತಂತ್ರಜ್ಞಾನ, ಮೊಬೈಲು, ಡಿಜಿಟಲ್ ಭರಾಟೆಯಲ್ಲಿ ನಮ್ಮ ಗ್ರಾಮೀಣ ಭಾಗದ ಹಲವಾರು ಕ್ರೀಡೆ, ಜಾನಪದ, ಹಳ್ಳಿ ಸೊಗಡು ಎಲ್ಲವೂ ಮಾಯವಾಗುತ್ತಿದ್ದು, ಆದ–ರೆ ಇಂತಹ ಸಮಯದಲ್ಲೂ ಮಸ್ಕಿ ತಾಲೂಕಿನ ಹಾಲಾಪೂರ ಗ್ರಾಮದಲ್ಲಿ ಶ್ರೀ ಬಸವೇಶ್ವರ ಜಾತ್ರೆ ಅಂಗವಾಗಿ ಹಳ್ಳಿ ಸೊಗಡಿನ, ಗ್ರಾಮೀಣ ಪ್ರತಿಭೆಗಳ ಅನಾವರಣಗೊಳ್ಳುವ ಎತ್ತುಗಳಿಂದ ಕಲ್ಲು ಎಳೆಯುವ ಸ್ಪರ್ಧೆ ನೋಡುಗರ ಕಣ್ಣು ಮನಸ್ಸು ಬಹಳಷ್ಟು ಆನಂದ ಮಾಯವಾಗಿತ್ತು,



ಗ್ರಾಮದ ಗೆಳೆಯರ ಬಳಗದಿಂದ 20,000 ರೂಪಾಯಿ ಸಂಗ್ರಹಿಸಿ 11 ಕ್ವಿಂಟಲ್ 40 ಕೆಜಿ ತೂಕದ ಕಲ್ಲನ್ನ ಖರೀದಿಸಿ ಇಂದು ಶ್ರೀ ಬಸವೇಶ್ವರ ಜಾತ್ರೆಯಲ್ಲಿ ಸಾಂಕೇತಿಕವಾಗಿ ಹನುಮಂತ ರಾಮಲದಿನ್ನಿ ಹಾಲಾಪೂರ ಎನ್ನುವ ರೈತನ ಜೋಡೆತ್ತುಗಳಿಂದ ಪೂಜೆ ಮಾಡಿಸುವ ಮೂಲಕ ಜಾತ್ರೆ ವಿಶೇಷವಾಗಿ ದೇವಸ್ಥಾನದ ಆವರಣದಲ್ಲಿ ನೂರಾರು ಜನರ ಮಧ್ಯೆ ಹನುಮಂತ ರಾಮಲದಿನಿ ಅವರ ಎತ್ತುಗಳು ಬಹಳಷ್ಟು ಸರಾಗವಾಗಿ 11 ಕ್ವಿಂಟಲ್ 40 ಕೆಜಿ ತೂಕದ ಭಾರವಾದ ಕಲ್ಲನ್ನ ಎಳೆಯುವ ಮೂಲಕ ನೆರೆದ ಜನರಿಂದ ಚಪ್ಪಾಳೆ, ಶಭಾಷ್ ಗಿಟ್ಟಿಸಿಕೊಂಡು ಜನರಿಂದ ಪ್ರೀತಿ ಮೆಚ್ಚುಗೆಗೆ ಪಾತ್ರರಾದರು, ಈ ಸಂದರ್ಭದಲ್ಲಿ ಪೂಜ್ಯರು, ಮುಖಂಡರು, ಗ್ರಾಮಸ್ಥರು ಇದ್ದರು.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ: ವಿದ್ಯಾರ್ಥಿಗಳು ಮೊಬೈಲ್, ಟಿವಿಯಿಂದ ದೂರವಿರಲು ಜಿ.ಪಂ ಸಿಇಓ ಈಶ್ವರ ಕುಮಾರ್ ಕಾಂದೂ ಸಲಹೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳು ಮೊಬೈಲ್ ಬಳಕೆ ಹಾಗೂ ಟಿವಿ ವೀಕ್ಷಣೆ ಮಾಡುವದನ್ನು ಕಡಿಮೆ ಮಾಡಿ ನಿಮ್ಮ ಸಮಯವನ್ನು ಓದುವದರ ಕಡೆ ಹೆಚ್ಚಿನ ಗಮನ ಹರಿಸಬೇಕೆಂದು ರಾಯಚೂರು ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಸಲಹೆ ನೀಡಿದ್ದಾರೆ.**

ಹತ್ತನೇ ತರಗತಿಯು ವಿದ್ಯಾರ್ಥಿಯ ಜೀವನದ ಒಂದು ಪ್ರಮುಖ ಘಟ್ಟ. ಈ ಸಮಯದಲ್ಲಿ ಮಗುವಿನ ಮೇಲೆ ಕೇವಲ ಶಿಕ್ಷಕರ ಜವಾಬ್ದಾರಿಯಷ್ಟೇ ಅಲ್ಲ. ಪೋಷಕರಾದ ನಿಮ್ಮ ಪ್ರೋತ್ಸಾಹ ಮತ್ತು ಬೆಂಬಲ ಅತಿ ಮುಖ್ಯವಾಗಿದೆ. ನಮ್ಮ ರಾಯಚೂರು ಜಿಲ್ಲೆಯ ಶೈಕ್ಷಣಿಕ ಪ್ರಗತಿಯಲ್ಲಿ ನಿಮ್ಮ ಮಗುವಿನ ಪಾತ್ರ ದೊಡ್ಡದಿದೆ. ಈ ಪರೀಕ್ಷಾ ಸಂದರ್ಭದಲ್ಲಿ ನಿಮ್ಮ ಮಗುವಿಗೆ ಪೂರಕವಾದ ವಾತಾವರಣ ಸೃಷ್ಟಿಸಬೇಕಾಗಿದೆ. ಪರೀಕ್ಷೆಯು ಒಂದು ಭಯದ ವಿಷಯವಾಗಬಾರದು.




ಮಗುವಿನ ಮೇಲೆ ಹೆಚ್ಚಿನ ಅಂಕಗಳ ಒತ್ತಡ ಹೇರಬೇಡಿ.

ಬದಲಿಗೆ. ನೀನು ನಿನ್ನ ಅತ್ಯುತ್ತಮ ಪ್ರಯತ್ನ ಮಾಡು, ನಾವು ನಿನ್ನ ಜೊತೆಗಿದ್ದೇವೆ ಎಂಬ ಭರವಸೆಯನ್ನು ನೀಡಬೇಕು. ಮನೆಯಲ್ಲಿ ಪೂರಕ ವಾತಾವರಣ ಸೃಷ್ಟಿಸಬೇಕು. ಮಗು ಓದುತ್ತಿರುವಾಗ ಟಿವಿ ಅಥವಾ ಮೊಬೈಲ್‌ಗಳ ಬಳಕೆಯನ್ನು ಕಡಿಮೆ ಮಾಡಬೇಕು. ಏಕಾಗ್ರತೆಯಿಂದ ಓದಲು ಬೇಕಾದ ಸ್ಥಳಾವಕಾಶ ಮಾಡಿಕೊಡಬೇಕು. ಪರೀಕ್ಷೆಯ ಸಮಯದಲ್ಲಿ ಮಗುವಿಗೆ ಪೌಷ್ಟಿಕ ಆಹಾರ ಮತ್ತು ಸಾಕಷ್ಟು ಕುಡಿಯುವ ನೀರನ್ನು ನೀಡಿ. ಮಗು ಕನಿಷ್ಠ 6–7 ಗಂಟೆಗಳ ಕಾಲ ಚೆನ್ನಾಗಿ ನಿದ್ರಿಸುತ್ತಿದೆಯೇ ಎಂದು ಖಚಿತಪಡಿಸಿಕೊಳ್ಳಿ. ನಿದ್ರೆ ಕಡಿಮೆಯಾದರೆ ಮರೆವು ಉಂಟಾಗುವ ಸಾಧ್ಯತೆ ಇರುತ್ತದೆ. ಮಗು ನಿಗದಿತ ಸಮಯದಲ್ಲಿ ಓದುವಂತೆ ಮತ್ತು ನಡುವೆ ಅಲ್ಪ ವಿರಾಮ ತೆಗೆದುಕೊಳ್ಳುವಂತೆ ಪ್ರೋತ್ಸಾಹಿಸಿ.

ನಿರಂತರವಾಗಿ ಓದುವುದಕ್ಕಿಂತ, ಅರ್ಥ ಮಾಡಿಕೊಂಡು ಓದುವುದು ಹೆಚ್ಚು ಫಲಪ್ರದ. ಇಂದಿನ ದಿನಗಳಲ್ಲಿ ಮೊಬೈಲ್ ಮತ್ತು ಟಿವಿಗಳು ವಿದ್ಯಾರ್ಥಿಗಳ ಏಕಾಗ್ರತೆಗೆ ದೊಡ್ಡ ಅಡ್ಡಿಯಾಗಿವೆ. ಆದ್ದರಿಂದ ಪರೀಕ್ಷೆಯ ಮುಗಿಯುವವರೆಗೂ ಮಗುವಿಗೆ ಮೊಬೈಲ್ ಫೋನ್ ಬಳಸಲು ಅವಕಾಶ ನೀಡಬೇಡಿ. ಅವಶ್ಯಕತೆ ಇದ್ದಲ್ಲಿ ಮಾತ್ರ ಶೈಕ್ಷಣಿಕ ಕಾರಣಗಳಿಗಾಗಿ ನಿಮ್ಮ ಮೇಲ್ವಿಚಾರಣೆಯಲ್ಲಿ ಬಳಸಿ. ಮನೆಯಲ್ಲಿ ಟಿವಿ ನೋಡುವುದನ್ನು ಸಂಪೂರ್ಣವಾಗಿ ಕಡಿಮೆ ಮಾಡಿ. ನಿಮ್ಮ ಮಗು ಓದುತ್ತಿರುವಾಗ ಮನೆಯ ಇತರ ಸದಸ್ಯರು ಟಿವಿ ನೋಡುವುದ–ರಿಂದ ಮಗುವಿನ ಗಮನ ಬೇರೆಡೆಗೆ ಸರಿಯುತ್ತದೆ.

ಸಾಮಾಜಿಕ ಜಾಲತಾಣಗಳಿಂದ (ವ್ಯಾಟ್ಸ್ ಆಪ್, ಇನ್ಸ್ಟಾ, ಯೂಟ್ಯೂಬ್) ಮಗುವನ್ನು ದೂರವಿರಿಸಿ, ಪಠ್ಯಪುಸ್ತಕಗಳತ್ತ ಗಮನ ಹರಿಸುವಂತೆ ಪ್ರೇರೇಪಿಸಿ. ನೆನಪಿಡಿ ಪ್ರತಿ ಮಗುವಿನಲ್ಲೂ ಒಂದು ವಿಶೇಷ ಪ್ರತಿಭೆಯಿರುತ್ತದೆ. ಅಂಕಗಳು ಮಾತ್ರ ಜೀವನವಲ್ಲ, ಆದರೆ ಶ್ರದ್ಧೆಯಿಂದ ಕೆಲಸ ಮಾಡುವ ಗುಣ ಜೀವನದ ಉದ್ದಕ್ಕೂ ನೆರವಾಗುತ್ತದೆ. ನಮ್ಮ ಜಿಲ್ಲೆಯ ಎಲ್ಲಾ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ, ಉತ್ತಮ ಯಶಸ್ಸು ಸಾಧಿಸಲಿ ಎಂಬುದು ನನ್ನ ಆಶಯವಾಗಿದೆ. ನಿಮ್ಮ ಮಗುವಿನ ಉಜ್ವಲ ಭವಿಷ್ಯಕ್ಕಾಗಿ ನಮ್ಮ ಶುಭಹಾರೈಕೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸೋದ್ಯಮ ಇಲಾಖೆಯಿಂದ ಮೊಬೈಲ್ ಕ್ಯಾಂಟೀನ್ ಖರೀದಿಸಲು ಸಹಾಯಧನಕ್ಕೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಪ್ರವಾಸೋದ್ಯಮ ಇಲಾಖೆಯಿಂದ 2025–26ನೇ ಸಾಲಿನ ಎಸ್.ಸಿ. ಎಸ್.ಪಿ., ಟಿ.ಎಸ್.ಪಿ. ಯೋಜನೆಯಡಿಯಲ್ಲಿ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಕೌಶಲ್ಯಾಭಿವೃದ್ಧಿ (ಎಂಟರನ್‌ಶಿಪ್ ಪ್ರೋಗ್ರಾಮ್ (ಇಪಿ)) ತರಬೇತಿ ಹಾಗೂ ಮೊಬೈಲ್ ಕ್ಯಾಂಟೀನ್ ಖರೀದಿಸಲು ಸಹಾಯಧನ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

ಎಂಟರನ್‌ಶಿಪ್ ಪ್ರೋಗ್ರಾಮ್




ಕಾರ್ಯಕ್ರಮಕ್ಕೆ ಭಾಗವಹಿಸುವ ಅಭ್ಯರ್ಥಿಗಳು ಕನಿಷ್ಠ 10 ನೇ ತರಗತಿ ಉತ್ತೀರ್ಣವಾಗಿರಬೇಕು. ಒಂದು ತಿಂಗಳಗಳ ಕಾಲ ತರಬೇತಿ ನೀಡಲಾಗುವುದು. ಅಭ್ಯರ್ಥಿಗಳು 20ರಿಂದ 55 ವರ್ಷದೊಳಗಿನ 6 ಪರಿಶಿಷ್ಟ ಜಾತಿ ಹಾಗೂ 4 ಪರಿಶಿಷ್ಟ ಪಂಗಡ ಅಭ್ಯರ್ಥಿಗಳ ಗುರಿಯನ್ನು ನಿಗಧಿಪಡಿಸಲಾಗಿದ್ದು, ಆಸಕ್ತರು ಮಾರ್ಚ್ 13ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಗಣೇಶ ಗುಡಿ ಹತ್ತಿರ, ನಿಜಲಿಂಗಪ್ಪ ಕಾಲೋನಿ, ರಾಯಚೂರು–584101, ದೂರವಾಣಿ ಸಂಖ್ಯೆ:08532–200677ಗೆ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರುಣ್ಯಾಶ್ರಮದಲ್ಲಿ ಶಂಕರ ಟ್ರಸ್ಟ್ ಕಾಲೇಜಿನ ಎಂ. ಎಸ್. ಡಬ್ಲ್ಯೂ ವಿದ್ಯಾರ್ಥಿಗಳ ಸೇವಾ ತರಬೇತಿ ಕಾರ್ಯಗಾರ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಫೆ 25 ಶಂಕರ ಟ್ರಸ್ಟ್ ಸ್ನಾತಕೋತ್ತರ ಪದವಿ ಮಹಾವಿದ್ಯಾಲಯ ಸಿಂಧನೂರು ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಎಂ. ಎಸ್. ಡಬ್ಲ್ಯೂ ಪ್ರಥಮ ಹಂತದ ವಿದ್ಯಾರ್ಥಿಗಳು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಸಾಮಾಜಿಕ ಸೇವೆಯ ಹಲವಾರು ಅಂಶಗಳ ಮೂಲಕ ಸಂವಾದ ನಡೆಸಿ ಸೇವಾ ತರಬೇತಿ ಕಾರ್ಯಗಾರದಲ್ಲಿ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ತರಬೇತಿ ಪಡೆದುಕೊಂಡು ಪ್ರಮಾಣ ಪತ್ರಗಳನ್ನು ಸ್ವೀಕರಿಸಿದರು.**

ಈ ಕಾರ್ಯಕ್ರಮದಲ್ಲಿ ಹಲವಾರು ವಿದ್ಯಾರ್ಥಿಗಳು ತಮ್ಮ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿ ಎಂ.ಎಸ್.ಡಬ್ಲ್ಯೂ.ಪದವಿ ಸ್ವೀಕ–ರಿಸಿದ ನಂತರ ಕಾರುಣ್ಯಾಶ್ರಮದ ಸೇವೆಯಲ್ಲಿ



ತಾವುಗಳು ಕೂಡ ಭಾಗಿಯಾಗುತ್ತೇವೆಂದು ಅನಿಸಿಕೆಗಳ ಮೂಲಕ ಭರವಸೆ ನೀಡಿದರು. ಈ ಸಮಯದಲ್ಲಿ ಶಂಕರ್ ಟ್ರಸ್ಟ್ ಸ್ನಾತಕೋತ್ತರ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಏಕ್ನಾವಲಿ ಅವರನ್ನು ಕಾರುಣ್ಯ ಆಶ್ರಮದ ವತಿಯಿಂದ ಸನ್ಮಾನಿಸಿದರು. ಈ ಕಾರ್ಯಗಾರದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ತಾವುಗಳು ಪಡೆಯುವ ಶಿಕ್ಷಣ ಸಮಾಜಕ್ಕೆ ತಮ್ಮನ್ನು ತಾವು ಅರ್ಪಿಸುವಂತಹ ಒಂದು ಹಂತದ ಶಿಕ್ಷಣ ಎಂ. ಎಸ್. ಡಬ್ಲ್ಯೂ ಪದವಿ ವಿದ್ಯಾರ್ಥಿಗಳಿಂದ ಇಂದು ನಮ್ಮ ರಾಜ್ಯದಲ್ಲಿ ಅನೇಕ ಸಮಾಜ ಪರ ಕಾರ್ಯಗಳು ಜರುಗುತ್ತಿವೆ.

ಈ ಕಾರುಣ್ಯ ಕುಟುಂಬದ ಕತ್ತಲೆಯ ಬದುಕಿಗೆ ಬೆಳಕು ಕೊಡುವಂತಹ ವಿದ್ಯಾರ್ಥಿಗಳು ತಾವುಗಳಾಗಬೇಕು. ನಮ್ಮ ಸಂಸ್ಕೃತಿ ಸಂಸ್ಕಾರಕ್ಕೆ ವಿರುದ್ಧವಾದ ವೃದ್ಧಾಶ್ರಮಗಳನ್ನು ಕನಸಲು ಯಾರು ಕಲ್ಪನೆ ಮಾಡಿಕೊಳ್ಳುವ ಹಾಗೆ ತಾವುಗಳು ಮಾಡಬೇಕು. ಈ ನಮ್ಮ ಕಾರುಣ್ಯ ಸಂಸ್ಥೆಯು ಎಂಟು ವರ್ಷಗಳ ಹಿಂದೆ ಅನಿವಾರ್ಯಕ್ಕಾಗಿ ನಿಜವಾದ ಅನಾಥರ ಬದುಕಿಗಾಗಿ ಹುಟ್ಟಿದೆಯ ಹೊರತು ಇದರಲ್ಲಿ ಯಾವ ಸ್ವಾರ್ಥತೆಯು ಇರುವುದಿಲ್ಲ. ಈ ಕಾರುಣ್ಯ ಸಂಸ್ಥೆ ನಡೆಸುವ ನಾವು ಮುಳ್ಳಿನ ಹಾಸಿಗೆಯ ಮೇಲೆ ಮಲಗಿರುವಂತ ಸ್ಥಿತಿ ನಮ್ಮದು ಪ್ರತಿಯೊಂದು ಸೇವಾ ಕಾರ್ಯಕ್ಕೆ ಟೀಕೆ ಮಾಡುವ ಮನುಷ್ಯರು ಪ್ರಥಮವಾಗಿ ತಮ್ಮ ತಂದೆ ತಾಯಿಗಳನ್ನು ನಮ್ಮಂತಹ ವೃದ್ಧಾಶ್ರಮಕ್ಕೆ ಕಳುಹಿಸದಿರಲಿ ಎನ್ನುವ ನಿರಂತರ ಪ್ರಾರ್ಥನೆ ನನ್ನದು.

ತಾವೆಲ್ಲರೂ ವೃದ್ಧಾಶ್ರಮಗಳ ಸಂಖ್ಯೆ ಜಾಸ್ತಿಯಾಗದಂತೆ ಸಾರ್ವಜನಿಕರಲ್ಲಿ ಹಿರಿಯರನ್ನು ಗೌರವಿಸಬೇಕು ಎನ್ನುವ ನಿರಂತರ ಅಭಿಯಾನ ತಮ್ಮಿಂದ ನಡೆಯಲಿ ಎನ್ನುವುದು ಕಾರುಣ್ಯ ಕುಟುಂಬದ ಆಶಯವಾಗಿದೆ. ಏಕೆಂದರೆ ಶಂಕರ ಟ್ರಸ್ಟ್ ಹುಟ್ಟಿದ ಪ್ರಥಮ ವರ್ಷದಲ್ಲಿ ನಾನು ಆ ಸಂಸ್ಥೆಯಲ್ಲಿ ಶಿಕ್ಷಣವನ್ನು ತೆಗೆದುಕೊಂಡು ಸಂಸ್ಕಾರವಂತನಾಗಿ ಸಮಾಜದಲ್ಲಿ ಗುರುತಿಸಿಕೊಳ್ಳಲು ಶಂಕರ್ ಟ್ರಸ್ಟ್ ಶಿಕ್ಷಣ ಸಂಸ್ಥೆ ಮೂಲ ಕಾರಣವಾಗಿದೆ. ಅಂ–ದು ನನಗೆ ವಿದ್ಯಾದಾನ ಮಾಡಿದ ಗುರುಗಳಿಗೆ ಶಂಕರ ಟ್ರಸ್ಟ್ ಶಿಕ್ಷಣ ಸಂಸ್ಥೆಗೆ ನನ್ನ ಹಾಗೂ ನನ್ನ ಕರುಣೆ ಕುಟುಂಬದ ವತಿಯಿಂದ ಹೃದಯಪೂರ್ವಕ ಹೃತ್ಪೂರ್ವಕ ಧನ್ಯವಾದಗಳನ್ನು ತಿಳಿಸುವುದರೊಂದಿಗೆ ಹಲವಾರು ವಿಷಯಗಳ ಮೂಲಕ ವಿದ್ಯಾರ್ಥಿಗಳಿಗೆ ಸೇವಾ ತರಬೇತಿಯನ್ನು ನೀಡಿದರು.

ಈ ಕಾರ್ಯಗಾರದಲ್ಲಿ ಶೇಕ್ಷಾವಲಿ ಪ್ರಾಚಾರ್ಯರು ಶಂಕರ ಟ್ರಸ್ಟ್ ಸ್ನಾತಕೋತ್ತರ ಪದವಿ ಮಹಾವಿದ್ಯಾಲಯ ಸಿಂಧನೂರು. ಮೌನೇಶ ಉಪನ್ಯಾಸಕರು ಶಂಕರ ಟ್ರಸ್ಟ್ ಕಾಲೇಜ್ ಸಿಂಧನೂರು. ಹಾಗೂ ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ ಮರಿಯಪ್ಪ ಜ್ಯೋತಿ ಲಕ್ಷ್ಮಿ ಮೀನಾಕ್ಷಿಮ್ಮ ಮತ್ತು ಕಾಲೇಜಿನ ಸುಮಾರು 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### Phd Veterinary Science

ಕರ್ನಾಟಕದಲ್ಲಿ ಪಶುವೈದ್ಯಕೀಯ ವಿಜ್ಞಾನದಲ್ಲಿ (Veterinary Science) ಪಿಎಚ್‌ಡಿ (Ph.D.) ಅಧ್ಯಯನ ಮಾಡಲು ಬಯಸುವವರಿಗೆ ಕರ್ನಾಟಕ ಪಶುವೈದ್ಯಕೀಯ, ಪ್ರಾಣಿ ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (KVAFSU), ಬೀದರ್ ಮುಖ್ಯ ಸಂಸ್ಥೆಯಾಗಿದೆ. Ph.D. in Veterinary Science (ಪಶುವೈದ್ಯಕೀಯ ವಿಜ್ಞಾನದಲ್ಲಿ ಡಾಕ್ಟರೇಟ್) ಕುರಿತ ಪ್ರಮುಖ ಮಾಹಿತಿ ಇಲ್ಲಿದೆ: 1. ಮುಖ್ಯ ಸಂಸ್ಥೆಗಳು (Colleges) KVAFSU, ಬೀದರ್: ಇದು ಕರ್ನಾಟಕದ ಪ್ರಮುಖ ಪಶುವೈದ್ಯಕೀಯ ವಿಶ್ವವಿದ್ಯಾಲಯ. ವೆಟರ್ನರಿ ಕಾಲೇಜು, ಬೆಂಗಳೂರು: ಪಶುವೈದ್ಯಕೀಯ ವಿಜ್ಞಾನದ ವಿಭಾಗಗಳನ್ನು ಹೊಂದಿದೆ (ಉದಾ: ಪಶುವೈದ್ಯಕೀಯ ಪರೋಪಜೀವಿ ವಿಜ್ಞಾನ). ವೆಟರ್ನರಿ ಕಾಲೇಜು, ಶಿವಮೊಗ್ಗ: ವಿವಿಧ ತಜ್ಞತೆಗಳನ್ನು (Specializations) ನೀಡುತ್ತದೆ. ವೆಟರ್ನರಿ ಕಾಲೇಜು, ಗದಗ: ಪಶುವೈದ್ಯಕೀಯ ಚಿಕಿತ್ಸಾ ವಿಜ್ಞಾನದಲ್ಲಿ ಡಾಕ್ಟರೇಟ್ ಅಧ್ಯಯನಗಳನ್ನು ನಡೆಸುತ್ತದೆ. 2. ಅರ್ಹತೆ (Eligibility) ಪದವಿ: ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪಶುವೈದ್ಯಕೀಯ ವಿಜ್ಞಾನದಲ್ಲಿ (B.V.Sc. & A.H.) ಪದವಿ ಪಡೆದಿರಬೇಕು. ಸ್ನಾತಕೋತ್ತರ ಪದವಿ (ಒ.ಗಿ.ಖಛಿ.): ಸಂಬಂಧಿತ ವಿಷಯದಲ್ಲಿ ಕನಿಷ್ಠ 55% ಅಂಕಗಳು (ಅಥ–ವಾ 7.5/10 ಔಉಕಂ) ಗಳಿಸಿರಬೇಕು. ಖಅ/ಖಖ ಅಭ್ಯರ್ಥಿಗಳಿಗೆ 50% ಅಂಕಗಳು ಅಥವಾ 7.0/10 ಔಉಕಂ ಸಾಕು. Kerala Veterinary and animal Sciences University Kerala Veterinary and animal Sciences University +1 3. ಕೋರ್ಸ್ ಅವಧಿ (Duration) ಪಿಎಚ್‌ಡಿ ಕೋರ್ಸ್‌ನ ಅವಧಿಯು ಸಾಮಾನ್ಯವಾಗಿ 3 ರಿಂದ 5 ವರ್ಷಗಳವರೆಗೆ ಇರುತ್ತದೆ, ಇದು ಸಂಶೋಧನಾ ಕಾರ್ಯವನ್ನು ಅವಲಂಬಿಸಿರುತ್ತದೆ. Docthub Docthub 4. ಪ್ರವೇಶ ಪ್ರಕ್ರಿಯೆ (Admission Process) ಪ್ರವೇಶವು ಪ್ರವೇಶ ಪರೀಕ್ಷೆ (Entrance Exam) ಮತ್ತು ಸಂದರ್ಶನದ (Interview) ಆಧಾರದ ಮೇಲೆ ಇರುತ್ತದೆ. KVAFSU ನಡೆಸುವ ಆಯಾ ವರ್ಷದ ಪ್ರಕಟಣೆಗಳನ್ನು (Notifications) ಗಮನಿಸಬೇಕು. Karnataka Veterinary, Animal and Fisheries University Karnataka Veterinary, Animal and Fisheries University +1 5. ಸಂಶೋಧನಾ ಕ್ಷೇತ್ರಗಳು (Specializations) ಅನಿಮಲ್ ನ್ಯೂಟ್ರಿಷನ್ (Animal Nutrition) ವೆಟರ್ನರಿ ಪ್ಯಾಥಾಲಜಿ (Veterinary Pathology) ಅನಿಮಲ್ ಹಸ್ಬೆಂಡರಿ ಎಕ್ಸ್‌ಟೆನ್ಷನ್ ಎಜುಕೇಶನ್ (Animal Husbandry Extension Education) ವೆಟರ್ನರಿ ಪ್ಯಾರಾಸಿಟಾಲಜಿ (Veterinary Parasitology) 6. ಉದ್ಯೋಗಾವಕಾಶಗಳು (Career Opportunities) ಪಶುವೈದ್ಯಕೀಯ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ (Assistant Professor). KRISHI VIGYAN KENDRA (KVK) ನಲ್ಲಿ ವಿಜ್ಞಾನಿಯಾಗಿ. ಸರ್ಕಾರಿ ಪಶುವೈದ್ಯಾಧಿಕಾರಿ (Veterinary Officer). ಖಾಸಗಿ ಸಂಸ್ಥೆಗಳಲ್ಲಿ ಸಂಶೋಧನಾ ವಿಜ್ಞಾನಿಯಾಗಿ.

## ಗ್ರಾಮೀಣ ಪ್ರದೇಶದಲ್ಲಿ ಮಾರ್ಚ್ 02ರಂದು ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಚಂದ್ರಬಂಡ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮಾರ್ಚ್ 2ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 03ಗಂಟೆವರೆಗೆ ಚಂದ್ರಬಂಡ ವಿದ್ಯುತ್ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಶವ ಸಂಸ್ಕಾರ ಪೆಟ್ಟಿಗೆ ಹಸ್ತಾಂತರಿಸಲು ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ರಾಯಚೂರು ಮಹಾನಗರ ಪಾಲಿಕೆ ನಿಧಿಯಲ್ಲಿ ಶೇ.29 ಯೋಜನೆಯಲ್ಲಿ ಕೊಟೇಷನ್ ಮುಖಾಂತರ ಖರೀದಿಸಿರುವ ಶವ ಸಂಸ್ಕಾರ ಪೆಟ್ಟಿಗೆಯನ್ನು ಸಫಾಯಿ ಕರ್ಮಚಾರಿ ಜನಾಂಗದವರಿಗೆ ಹಸ್ತಾಂತರಿಸಲು ಅರ್ಜಿ ಆಹ್ವಾನಿಸಲಾಗಿದೆ. ಶವ ಸಂಸ್ಕಾರ ಪೆಟ್ಟಿಗೆಯನ್ನು ಇಡುವುದಕ್ಕೆ ಕೋಣೆಯ ವ್ಯವಸ್ಥೆ ಇರತಕ್ಕದ್ದು,**

ಸಫಾಯಿ ಕರ್ಮಚಾರಿ ಜನಾಂಗಕ್ಕೆ ಮಾತ್ರ ಸೀಮಿತವಾಗಿರುತ್ತದೆ, ಸಫಾಯಿ ಕರ್ಮಚಾರಿ ಜನಾಂಗದ ಸಂಘವು ಸೊಸೈಟಿ ನೋಂದಣಿ ಕಾಯ್ದೆ 1860/ ಟ್ರಸ್ಟ್ ಕಾಯ್ದೆ 1860 ನಲ್ಲಿ ನೋಂದಾಯಿತವಾಗಿರುವವರು ಪಾಲಿಕೆಯ ಡೇ–ನಲ್ಮ್ ವಿಭಾಗಕ್ಕೆ ಫೆ.28ರ ಸಂಜೆ 5ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪಾಲಿಕೆಯ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಎನ್.ಎಸ್.ಭೋಸರಾಜು ಅವರಿಗೆ ವಿಶ್ವದ 34 ಅಗ್ರಗಣ್ಯ ವಿಜ್ಞಾನಿಗಳಿಂದ ಪತ್ರ: ಜಾಗತಿಕ ವಿಜ್ಞಾನಿಗಳ ಸಮುದಾಯದಿಂದ ಕರ್ನಾಟಕದ ಕ್ವ್ಯೂ–ಮಿಂಟ್ ಯೋಜನೆಗೆ ಬೆಂಬಲ

ನೈಜ್ಯ ದೆಸೆ ನ್ಯೂಸ್



**ರಾಯಚೂರು: ಕರ್ನಾಟಕದ ತಂತ್ರಜ್ಞಾನ ದೂರದೃಷ್ಟಿಗೆ ಜಾಗತಿಕ ಮಟ್ಟದಲ್ಲಿ ಭಾರಿ ಮನ್ನಣೆ ದೊರೆತಿದೆ. ವಿಶ್ವದ ಅತ್ಯಂತ ಪ್ರತಿಷ್ಠಿತ ಸಂಶೋಧನಾ ಸಂಸ್ಥೆಗಳ 34 ಖ್ಯಾತ ವಿಜ್ಞಾನಿಗಳು, ರಾಜ್ಯದ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು ಅವರಿಗೆ ಅಧಿಕೃತವಾಗಿ ಪತ್ರ ಬರೆದಿದ್ದು, ರಾಜ್ಯದ ಕ್ವಾಂಟಮ್ ಮೆಟೀ–ರಿಯಲ್ ಇನ್ನೋವೇಶನ್ ನೆಟ್‌ವರ್ಕ್' (ಕ್ವ್ಯೂ–ಮಿಂಟ್) ಯೋಜನೆಗೆ ಬೆಂಬಲವನ್ನು ವ್ಯಕ್ತಪಡಿಸಿದ್ದಾರೆ.**

ಇತ್ತೀಚೆಗೆ ಐಸಿಟಿಎಸ್–ಟಿಐಎಫ್‌ಆರ್ ನಲ್ಲಿ ನಡೆದ 'ಫ್ರಾಂಟಿಯರ್ಸ್ ಇನ್ ಕ್ವಾಂಟಮ್ ಕಂಡೆನ್ಸ್ಡ ಮ್ಯಾಟರ್ ಫಿಸಿಕ್ಸ್' (ಎಫ್‌ಕ್ಯೂಸಿ–ಎಮ್‌ಪಿ) ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ, ಜಾಗತಿಕ ವಿಜ್ಞಾನಿಗಳ ಸಮುದಾಯವು ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಕ್ವಾಂಟಮ್ ಸಿಟಿ ಕಾರ್ಯಕ್ರಮದ ಪ್ರಮುಖ ಭಾಗವಾಗಿ ಕ್ವ್ಯೂ–ಮಿಂಟ್ ಸ್ಥಾಪಿಸುವ ದೂರದೃಷ್ಟಿಯ ಕ್ರಮವನ್ನು ಶ್ಲಾಘಿಸಿದೆ. ಕಂಪ್ಯೂಟಿಂಗ್, ಸಂವಹನ ಮತ್ತು ಸೆನ್ಸಿಂಗ್ ಕ್ಷೇತ್ರಗಳಲ್ಲಿ ಮುಂದಿನ ಪೀಳಿಗೆಯ ತಂತ್ರಜ್ಞಾನಗಳ ಆವಿಷ್ಕಾರಕ್ಕೆ ನವೀನ ಕ್ವಾಂಟಮ್ ವಸ್ತುಗಳು ಅತ್ಯಂತ ನಿರ್ಣಾಯಕ ಅಡಿಪಾಯವಾಗಿವೆ ಎಂದು ವಿಜ್ಞಾನಿಗಳು ತಮ್ಮ ಜಂಟಿ ಪತ್ರದಲ್ಲಿ ಹೇಳಿದ್ದಾರೆ.

ವಿಶ್ವದ ಪ್ರಮುಖ ವಿಜ್ಞಾನಿಗಳ ಬೆಂಬಲವನ್ನು ಸಚಿವರಾದ ಎನ್.ಎಸ್.ಭೋಸರಾಜು ಅವರು ಸ್ವಾಗತಿಸಿದ್ದಾರೆ. ಕರ್ನಾಟಕ ರಾಜ್ಯವು ಮೊದಲಿನಿಂದಲೂ ನಾವೀನ್ಯತೆಗೆ ಹೆಸರುವಾಸಿಯಾಗಿದೆ. ವಿಶ್ವದ ಅಗ್ರಗಣ್ಯ 34 ಕ್ವಾಂಟಮ್ ವಿಜ್ಞಾನಿಗಳಿಂದ ಇಂತಹ ಬೆಂಬಲ ದೊರೆತಿರುವುದು ನಮ್ಮ ಗುರಿಯ ಉತ್ತಮ ದಾರಿಯಲ್ಲಿ ನಡೆಯುತ್ತಿರುವುದನ್ನು ತೋರಿಸುತ್ತದೆ. ಕ್ವಾಂಟಮ್ ಮೆಟೀರಿಯಲ್ ಇನ್ನೋವೇಶನ್ ನೆಟ್‌ವರ್ಕ್ ಅನ್ನು ಅನುಷ್ಠಾನಗೊಳಿಸಲು ನಾವು ಉತ್ಸುಕರಾಗಿದ್ದೇವೆ. ಸುಧಾರಿತ ಸಂಶೋಧನೆ ಮತ್ತು ಉತ್ಪಾದನೆಗಾಗಿ ಉತ್ತಮ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಮೂಲಕ 2035ರ ವೇಳೆಗೆ 20 ಬಿಲಿಯನ್ ಡಾಲರ್ ಮೌಲ್ಯದ ಕ್ವಾಂಟಮ್ ಆರ್ಥಿಕತೆಯ ಗುರಿಯನ್ನು ತಲುಪಲು ನಾವು ಅಡಿಪಾಯ ಹಾಕುತ್ತಿದ್ದೇವೆ.

ಜೊತೆಗೆ ಈ ಕ್ಷೇತ್ರದಲ್ಲಿ ಸ್ವಾವಲಂಬನೆಯನ್ನು ಸಾಧಿಸಿ, ನಮ್ಮ ಯುವಜನತೆಗೆ ಉದ್ಯೋಗಗಳನ್ನು ಸೃಷ್ಟಿಸಲಿದ್ದೇವೆ ಎಂದು ತಿಳಿಸಿದರು. ಕ್ವ್ಯೂ–ಮಿಂಟ್ ಅನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು, ವಿಜ್ಞಾನಿಗಳು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಐಟಿ/ಬಿಟಿ ಇಲಾಖೆಗೆ, ವಿಶ್ವದರ್ಜೆಯ ತಜ್ಞರನ್ನು ಒಳಗೊಂಡ ಕೇಂದ್ರೀಕೃತ ಕ್ವಾಂಟಮ್ ಮೆಟೀರಿಯಲ್ಸ್ ಫೌಂಡ್ರಿಯನ್ನು ಸ್ಥಾಪಿಸುವುದು, ಸಮಗ್ರ ಕಂಪ್ಯೂಟೇಶನಲ್ ಮತ್ತು ಡೇಟಾ ಸೈನ್ಸ್ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವುದು ಹಾಗೂ ಬಹು–ಸಂಸ್ಥೆಗಳ ಸಹಯೋಗವನ್ನು ಉತ್ತೇಜಿಸುವಂತಹ ಪ್ರಮುಖ ಸಲಹೆಗಳನ್ನು ನೀಡಿದ್ದಾರೆ.

ಅಲ್ಲದೆ, ವಿಶ್ವಾಸ–ವರ್ಧಿಸುವ ಯೋಜನೆಗಳ ಮೂಲಕ ಹಂತ ಹಂತದ ಅನುಷ್ಠಾನದ ಅಗತ್ಯವನ್ನು ಅವರು ಎತ್ತಿ ತೋರಿಸಿದ್ದಾರೆ. ಈ ಪತ್ರಕ್ಕೆ ಸಹಿ ಹಾಕಿರುವ ಗಣ್ಯ ವಿಜ್ಞಾನಿಗಳು ಐಐಎಸ್‌ಸಿ, ಟಿಐಎಫ್‌ಆರ್, ಎಂಐಟಿ, ಆಕ್ಸ್‌ಫರ್ಡ್, ಪ್ರಿನ್ಸ್‌ಟನ್ ಮತ್ತು ಕೊಲಂಬಿಯಾ ವಿಶ್ವವಿದ್ಯಾಲಯಗಳಂತಹ ಪ್ರಮುಖ ಜಾಗತಿಕ ಸಂಸ್ಥೆಗಳನ್ನು ಪ್ರತಿನಿಧಿಸುತ್ತಾರೆ.

## ಎಐಟಿಯುಸಿಯಿಂದ ಮಾರ್ಚ್ 2ಕ್ಕೆ ವಿವಿಧ ಬೇಡಿಕೆ ಈಡೇರಿಕೆಗಾಗಿ ಬೆಂಗಳೂರು ಚಲೋ: ಡಿ.ಎಚ್.ಕಂಬಳಿ

ನೈಜ್ಯ ದೆಸೆ ನ್ಯೂಸ್

**ನಾಲ್ಕು ದಶಕಗಳ ಕಾಲ ಕೇಂದ್ರ ಮತ್ತು ರಾಜ್ಯ ಸರ್ಕಾರ ಅಂಗನವಾಡಿ ಕಾರ್ಯಕರ್ತೆಯರನ್ನು ಸಹಾಯಕರನ್ನು ಗಮನಿಸದೆ, ಗ್ರಾಚ್ಯುಟಿ, ಪೆನ್ಸನ್, ಕೊಡದೆ ಮಲತಾಯಿ ಧೋರಣೆ ಅನುಸ–ರಿಸುತ್ತಿದೆ. ಅಲ್ಲದೆ ಇಂದಿನ ಬೆಲೆ ಏರಿಕೆಯು ಜೀವನ ನಿರ್ವಹಣೆಗೆ ಹೊರೆಯಾಗುತ್ತಿದೆ ಕನಿಷ್ಠ ಕೂಲಿಯನ್ನು ಸಹ ಕೊಡದೆ ಸರ್ಕಾರ ಮೀನ ಮೇಷ ಎಣಿಸುತ್ತಿದೆ ಎಂದು ಫೆಡರೇಶನ್ ಜಿಲ್ಲಾ ಕಾರ್ಯದರ್ಶಿ ಸಂಗಯ್ಯಸ್ವಾಮಿ ಹಿರೇಮಠ ಹೇಳಿದರು.**

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರವು ಬರುವ ಪೂರ್ವದಲ್ಲಿ ಪ್ರಿಯಾಂಕ ಗಾಂಧಿ ಕಾನ್ಪುರದಲ್ಲಿ 6ನೇ ಗ್ಯಾರಂಟಿಯನ್ನಾಗಿ ಘೋಷಿಸಿ ಅಂಗನವಾಡಿ ಕಾರ್ಯಕರ್ತೆಯರಿಗೆ 15 ಸಾವಿರ, ಸಹಾಯಕಿಯರಿಗೆ 10 ಸಾವಿರ ಗೌರವ ಧನ ಹೆಚ್ಚಿಸುವುದಾಗಿ ಹೇಳಿದ್ದರು. ಕೊಟ್ಟ ಮಾತಿನಂತೆ ನಡೆದುಕೊಳ್ಳುವ ಸರ್ಕಾರ ತಾವೇ ಹೇಳಿದ ಮಾತುಗಳನ್ನು ಮರೆತರೇಕೆ ಎಂದು ಪ್ರಶ್ನಿಸಿದರು ನಂತರ ರಾಜ್ಯ ಉಪಾಧ್ಯಕ್ಷ ತಿಪ್ಪಯ್ಯಶೆಟ್ಟಿ ಮಾತನಾಡಿ, ಕೇಂದ್ರಗಳಲ್ಲಿ ಸೇವೆ ಸಲ್ಲಿಸಿದ ಸುಮಾರು 2011ರಿಂದ ನಿವೃತ್ತರಾಗಿರುವ ವಯೋವೃದ್ಧ ಕಾರ್ಯಕರ್ತೆಯರು ಮತ್ತು ಸಹಾಯಕಿಂ–ಯರಿಗೆ ಗ್ರಾಚ್ಯುಟಿ ಸೌಲಭ್ಯ, ನಿವೃತ್ತಿ ಪಡೆದವ–ರಿಗೂ ಗ್ರಾಚ್ಯುಟಿ ಅನಕೂಲ ಕಲ್ಪಿಸಬೇಕೆನ್ನುವ ಬೇಡಿಕೆ ಸೇರಿದಂತೆ ಇನ್ನಿತರೇ ಪ್ರಮುಖ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮಾರ್ಚ್ 2ರಂದು ಬೆಂಗಳೂರು ಚಲೋ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದರು.




ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಂ–ಯರ ಫೆಡರೇಶನ್ (ಎಐಟಿಯುಸಿ) ಜಿಲ್ಲಾ ಗೌರವಾಧ್ಯಕ್ಷ ಡಿ.ಎಚ್.ಕಂಬಳಿ ಮಾತನಾಡಿ, ಅಂಗನವಾಡಿ ಕೇಂದ್ರದ ಕೆಲಸದ ಜವಾಬ್ದಾ–ರಿಯೊಂದಿಗೆ ಹೆಚ್ಚುವರಿಯಾಗಿ ಹಾಗೂ ಬಲವಂತವಾಗಿ ಬಿಎಲ್ ಓ ಸೇರಿ ಇನ್ನಿತರೆ ಜವಾಬ್ದಾರಿ ಹೊರಿಸುತ್ತಿರುವುದರಿಂದ ನಮ್ಮ ಅಂಗನವಾಡಿ ಕಾರ್ಯಕರ್ತೆಯರಿಗೆ, ಹಾಗೂ ಸಹಾಯಕಿಯರಿಗೆ ತಮ್ಮ ಕರ್ತವ್ಯ ನಿರ್ವಹಿಸಲು ಬಹಳ ಸಮಸ್ಯೆಯಾಗುತ್ತಿದೆ. ಬಿಎಲ್‌ಓ ಜವಾಬ್ದಾರಿ ನಿರಾಕರಿಸುವ ಕಾರ್ಯಕರ್ತೆಯರಿಗೆ ಶಿಸ್ತು ಕ್ರಮ ಜರುಗಿಸುತ್ತಿರುವುದು ಕೂಡ ಸರಿಯಲ್ಲ. ಅಲ್ಲದೆ ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ ಎಲ್‌ಕೆಜಿ–ಯುಕೆಜಿ ಪ್ರಾರಂಭಿಸಲು ಅವಕಾಶ ಕೊಟ್ಟ ಕಾರಣ ಅಂಗನವಾಡಿ ಕೇಂದ್ರಗಳಿಗೆ ಬರುವ ಮಕ್ಕಳ ಸಂಖ್ಯೆ ಕ್ಷೀಣಿಸುತ್ತಿದ್ದು, ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಮೂಲ ಆಶಯಗಳನ್ನ ಗಾಳಿಗೆ ತೂರಿದಂತಿದೆ.

ಕಾರಣ ಅಂಗನವಾಡಿ ಕೇಂದ್ರಗಳಲ್ಲಿಯೇ ಎಲ್.ಕೆಜಿ ಮತ್ತು ಯುಕೆ–ಜಿಗಳನ್ನು ಪ್ರಾರಂಭಿಸಿ ಅಂಗನವಾಡಿಗೆ ಬರುವ ಮಕ್ಕಳಿಗೆ ಉತ್ತಮ ಪೌಷ್ಟಿಕ ಆಹಾರ ತಯಾರಿಸಿ ಬಡಿಸಲು ಒಬ್ಬ ವಿದ್ಯಾರ್ಥಿಗೆ ತರಕಾರಿ ವೆಚ್ಚ ಕೇವಲ 50 ಪೈಸೆ ಕೊಡುತ್ತಿದೆ ಸರ್ಕಾರ ಇದನ್ನು ಬೆಲೆ ಏರಿಕೆಗೆ ತಕ್ಕಂತೆ ಹೆಚ್ಚಿಸಬೇಕು ಎಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಮಾರ್ಚ್ 2 ಮತ್ತು 3ರಂದು ನಡೆಯುವ ಬೃಹತ್ ಹೋರಾಟದಲ್ಲಿ ಸರ್ಕಾರಕ್ಕೆ ಒತ್ತಾಯ ಮಾಡಲಾಗುವುದು ಎಂದು ತಿಳಿಸಿದರು.

ತದನಂತರ ತಾಲೂಕು ಅಧ್ಯಕ್ಷೆ ಗಿರಿಜಮ್ಮ ಮಾತನಾಡಿ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರ ಡಿ.ಎ.30 ರೂ.ಇರುವುದನ್ನು ಬೆಲೆ ಏರಿಕೆಗೆ ಅನುಗುಣವಾಗಿ ಹೆಚ್ಚಿಸಬೇಕು,

ಇದನ್ನು ನಗರ ಪ್ರದೇಶದ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸುವವರಿಗೂ ವಿಸ್ತರಿಸಬೇಕು. ಮಾತೃವಂದನ, ಭಾಗ್ಯಲಕ್ಷ್ಮಿ ಪ್ರೋತ್ಸಾಹ ಧನ ಬಿಡುಗಡೆ ಮಾಡಬೇಕು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅನೇಕ ಅಂಗನವಾಡಿ ಕೇಂದ್ರಗಳ ಬಾಡಿಗೆಯನ್ನು ಪ್ರತಿ ತಿಂಗಳು ಕಾಲಕಾಲಕ್ಕೆ ಬಿಡುಗಡೆ ಮಾಡಬೇಕು. ಬಾಡಿಗೆ ಕಟ್ಟಡಗಳನ್ನು ಪಡೆಯಲು ಅಗತ್ಯವಾದ ಮುಂಗಡ ಹಣ ಬಿಡುಗಡೆ ಮಾಡಬೇಕು. ಕೇಂದ್ರ ಸರ್ಕಾರ ಅನುಮೋದನೆ ನೀಡದೆ ಇರುವ ಅಂಗನವಾಡಿ ಕೇಂದ್ರಗಳಿಗೆ ಬಾಡಿಗೆ ಹಣ ಮತ್ತು ಪೋಷನ್ ಅಭಿಯಾನದ ಪ್ರೋತ್ಸಾಹ ಧನವನ್ನು ನೀಡುವಂತೆ ಕ್ರಮ ಕೈಗೊಳ್ಳಬೇಕು. ಅನಾರೋಗ್ಯಕ್ಕೆ ತುತ್ತಾಗುವ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯ–ರಿಗೆ ಶಸ್ತ್ರಚಿಕಿತ್ಸೆ ಸೇರಿದಂತೆ ಎಲ್ಲಾ ರೀತಿಯ ಚಿಕಿತ್ಸೆಗಾಗಿ ಉಚಿತ ವೈದ್ಯಕೀಯ ಸೌಲಭ್ಯ ನೀಡಲು ಕ್ರಮ ಕೈಗೊಳ್ಳಬೇಕು. ಅನಾರೋಗ್ಯಕ್ಕೆ ಒಳಗಾದ ಅವಧಿಯನ್ನು ವೇತನ ಸಹಿತ ವೈದ್ಯಕೀಯ ರಜೆ ಎಂದು ಪರಿಗಣಿಸಬೇಕು. ಕಾರ್ಯಕರ್ತೆಯರ ಮಾಸಿಕ ಭತ್ಯೆ 50 ರೂ. ಕೊಡುತ್ತಿದ್ದು, ಇದನ್ನು ಕೂಡ ಹೆಚ್ಚಿಸಬೇಕು ಮೊಟ್ಟೆಯ ದರ ಏರುಪೇರು ಆಗುತ್ತಿದ್ದು, ಮಾರುಕಟ್ಟೆಯ ದರ ಹೆಚ್ಚಳಕ್ಕೆ ಅನುಗುಣವಾಗಿ ಮೊಟ್ಟೆಯ ಹಣವನ್ನು ಬಿಡುಗಡೆ ಮಾಡಬೇಕು.

ಅನುಕಂಪದ ಆಧಾರದ ಮೇಲೆ ಕೆಲಸಕ್ಕೆ ನೇಮಕ ಮಾಡುವ ಸಂದರ್ಭದಲ್ಲಿ ವಾಸ ಸ್ಥಳಕ್ಕೆ ಇರುವ ನಿಯಮವನ್ನು ಸಡಿಲಿಸಬೇಕು. ಅಂಗನವಾಡಿ ಕೇಂದ್ರಗಳ ನಿರ್ವಹಣೆಗಾಗಿ ಬಿಡುಗಡೆಗೊಳಿಸುತ್ತಿರುವ 2 ಸಾವಿರ ಸಾದಿಲ್ವಾರು ಹಣವನ್ನು ಇನ್ನಿತರೆ ಅನೇಕ ಕಾರ್ಯಕ್ರಮಗಳಿಗೂ ಕೂಡ ಬಳಕೆ ಮಾಡಲು ಸೂಚಿಸುತ್ತಿರುವುದ–ರಿಂದ ಸಾದಿಲ್ವಾರು ಹಣ ಬಳಕೆಯ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ವಿವರಿಸಿದರು. ಈ ವೇಳೆ: ರಾಜ್ಯ ಉಪಾಧ್ಯಕ್ಷ ತಿಪ್ಪಯ್ಯಶೆಟ್ಟಿ, ಜಿಲ್ಲಾ ಘಟಕದ ಅಧ್ಯಕ್ಷೆ ಸುಲೋಚನಾ ಸಿಪಿಐನ ಜಿಲ್ಲಾ ಕಾರ್ಯದರ್ಶಿ ಚಂದ್ರಶೇಖರ ಕ್ಯಾತ್ನಟ್ಟಿ, ಆದಿಲಕ್ಷ್ಮಿ ಪ್ರಧಾನ ಕಾರ್ಯದರ್ಶಿ, ಮಾನ್ವಿ ಮಹಾಂತಮ್ಮ, ರತ್ನಮ್ಮ ತುರ್ವಿಹಾಳ, ಲಕ್ಷ್ಮಿ ತಾಲೂಕು ಖಜಾಂಚಿ, ಯಮುನಮ್ಮ ಸಹ ಖಜಾಂಚಿ, ಜಿಲ್ಲಾ ಮಹಿಳಾ ಸದಸ್ಯೆ ಸಾವಿತ್ರಿ, ಹಾಗೂ ಲಿಂಗರಾಜ ಕೊಪ್ಪಳ, ಸೇರಿದಂತೆ ಅನೇಕರಿದ್ದರು.

## ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ 'ಕರ್ನಾಟಕ ದರ್ಶನ' ಪ್ರವಾಸಕ್ಕೆ ಚಾಲನೆ: ಶಾಸಕ ಹಂಪನಗೌಡ ಬಾದರ್ಲಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ವಿದ್ಯಾರ್ಥಿಗಳಲ್ಲಿ ರಾಜ್ಯದ ಐತಿಹಾಸಿಕ, ಸಾಂಸ್ಕೃತಿಕ ಪರಂಪರೆಯ ಅರಿವು ಮೂಡಿಸುವ ಉದ್ದೇಶದೊಂದಿಗೆ ಕರ್ನಾಟಕ ಸರ್ಕಾರ ಹಮ್ಮಿಕೊಂಡಿರುವ ಮಹತ್ವಾಕಾಂಕ್ಷೆಯ 'ಕರ್ನಾಟಕ ದರ್ಶನ' ಕಾರ್ಯಕ್ರಮಕ್ಕೆ ಸಿಂಧನೂ–ರಿನಲ್ಲಿ ಅದ್ದೂರಿ ಚಾಲನೆ ನೀಡಲಾಯಿತು.**

ರಾಜ್ಯ ಸರ್ಕಾರದ ಈ ವಿಶಿಷ್ಟ ಯೋಜನೆಯಡಿ ಸಿಂಧನೂರಿನ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಕರ್ನಾಟಕದ ವಿವಿಧ ಪ್ರೇಕ್ಷಣೀಯ ಸ್ಥಳಗಳು, ಐತಿಹಾಸಿಕ ಸ್ಮಾರಕಗಳು ಹಾಗೂ ಸಾಂಸ್ಕೃತಿಕ ಕೇಂದ್ರಗಳನ್ನು ಸಂದರ್ಶಿಸುವ ಸುವರ್ಣ ಅವಕಾಶ ಲಭಿಸಿದೆ. ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ, ನೇರ ವೀಕ್ಷಣೆಯ ಮೂಲಕ ವಿದ್ಯಾರ್ಥಿಗಳು




ನಮ್ಮ ನಾಡಿನ ವೈವಿಧ್ಯತೆಯನ್ನು ಅರಿಯಲು ಇದು ಸಹಕಾರಿಯಾಗಿದೆ. ಇದು ಅವರ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ದಾರಿ ಮಾಡಿಕೊಡಲಿದೆ.

ಸಿಂಧನೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಹಂಪನಗೌಡ ಬಾದರ್ಲಿ ಸಾಹೇಬರ ಮಾರ್ಗದರ್ಶನದಲ್ಲಿ ಆಯೋಜಿಸಲಾದ ಈ ಪ್ರವಾಸಕ್ಕೆ, ಅವರ ಅನುಪಸ್ಥಿತಿಯಲ್ಲಿ ಮೊಮ್ಮಗ ಹಾಗೂ



ಯುವ ಮುಖಂಡರಾದ ಬಸನಗೌಡ ಬಾದರ್ಲಿ ವಕೀಲರು ಅವರು ಹಸಿರು ನಿಶಾನೆ ತೋರಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಬಸನಗೌಡ ಬಾದರ್ಲಿಯವರು, "ವಿದ್ಯಾರ್ಥಿ ಜೀವನದಲ್ಲಿ ಪ್ರವಾಸಗಳು ಜ್ಞಾನದ ವಿಸ್ತರಣೆಗೆ ಪೂರಕವಾಗಿರುತ್ತವೆ. ನಮ್ಮ ರಾಜ್ಯದ ಇತಿಹಾಸ ಮತ್ತು ಸಂಸ್ಕೃತಿಯನ್ನು ಹತ್ತಿರದಿಂದ ನೋಡಿ ಕಲಿಯುವ ಈ ಅವಕಾಶವನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು," ಎಂದು ತಿಳಿಸಿ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

## ಶ್ರೀ ರೇಣುಕಾಚಾರ್ಯ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆಯಾಗಲಿ: ತಹಶೀಲ್ದಾರ್ ಜಗದೀಶ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾಡಳಿತದಿಂದ ಜಿಲ್ಲಾ ಕೇಂದ್ರದಲ್ಲಿ ಮಾರ್ಚ್ 01ರ ಭಾನುವಾರ ದಂದು ಆಚ–ರಿಸಲಾಗುವ ಶ್ರೀ ರೇಣುಕಾಚಾರ್ಯ ಜಯಂತಿಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾ–ರಿಗಳಾದ ಕಚೇರಿಯ ತಹಶೀಲ್ದಾರ್ ಜಗದೀಶ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಫೆ.24ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀರೇಣುಕಾಚಾರ್ಯ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.**

ಜಿಲ್ಲೆಯ ಎಲ್ಲ ತಾಲೂಕು ಸರ್ಕಾರಿ ಕಚೇರಿಗಳು, ಗ್ರಾಮ ಪಂಚಾಯಿತಿಗಳಲ್ಲಿ, ಶಾಲಾ–ಕಾಲೇಜುಗಳು ಹಾಗೂ ವಸತಿ ನಿಲಯಗಳಲ್ಲಿ ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಕಡ್ಡಾಯವಾಗಿ



ಆಚರಣೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ಸಂಬಂಧಿಸಿದ ಅಧಿಕಾರಿಗಳು ನಾನಾ ಕಾರ್ಯಸಿದ್ಧತೆಗೆ ಅಗತ್ಯ ಕ್ರಮ ವಹಿಸಬೇಕು. ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಅಂದು ಜಿಲ್ಲಾ ಕೇಂದ್ರದಲ್ಲಿ ಬೆಳಿಗ್ಗೆ 09 ಗಂಟೆಗೆ ನಗರದ ಜಗದ್ಗುರು ಶ್ರೀ ರೇಣುಕಾಚಾರ್ಯ ಸರ್ಕಲ್ ನಿಂದ ಭಾವಚಿತ್ರದ ಮೆರವಣಿಗೆ ನಡೆಯಲಿದೆ.

ಬೆಳಿಗ್ಗೆ 11 ಗಂಟೆಗೆ ವೀರಶೈವ ಕಲ್ಯಾಣ ಮಂಟಪದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಮೆರವಣಿಗೆ ಸಾಗುವ ಮಾರ್ಗ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆಯನ್ನು ಮಹಾನಗರ ಪಾಲಿಕೆಯಿಂದ ಕಲ್ಪಿಸಬೇಕು ಎಂದರು. ಜಯಂತಿ ಕಾರ್ಯಕ್ರಮದ ವೇದಿಕೆ ಅಲಂಕಾರ, ಗಣ್ಯರಿಗೆ ಪುಸ್ತಕ ವಿತರಣೆ, ಪೂಜೆಗೆ ಹೂವು–ಹಾರಗಳ ವ್ಯವಸ್ಥೆ ಮಾಡಬೇಕು. ಪೊಲೀಸ್ ಇಲಾಖೆಯಿಂದ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸೂಕ್ತ ಬಂದೋಬಸ್ತ್ ಒದಗಿಸಬೇಕು. ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರ ಆಹ್ವಾನಕ್ಕೆ ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ವೇದಿಕೆ ಕಾರ್ಯಕ್ರಮದಲ್ಲಿ ಶ್ರೀ ರೇಣುಕಾಚಾರ್ಯ ಅವರ ಜಯಂತಿ ಕುರಿತು ಉಪನ್ಯಾಸ ನೀಡಲು ಉತ್ತಮ ಅಭ್ಯರ್ಥಿಗಳಿಗೆ ಆಹ್ವಾನಿಸಲು ನಿರ್ಣಯಿಸಲಾಯಿತು.

ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಎಲ್ಲರೂ ಅನುಕೂಲ ಮಾಡಿಕೊಡಬೇಕು ಎಂದು ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿ ತಹಶೀಲ್ದಾರರು ಸಮಾಜದ ಮುಖಂಡರಲ್ಲಿ ಕೋರಿದರು. ಇದೇ ಸಂದರ್ಭದಲ್ಲಿ ಸೋಮವಾರಪೇಟೆ ಹಿರೇಮಠದ ಅಭಿನವ ರಾಚೋಟಿವೀರ ಶಿವಾಚಾರ್ಯರು, ಮಂಗಳವಾರಪೇಟೆ ಹಿರೇಮಠದ ಸಂಗಮೇಶ್ವರ ಶಿವಾಚಾರ್ಯ ಹಾಗೂ ಸಮಾಜದ ಮುಖಂಡರಾದ ಸಂತೋಷ ರಾಜಗುರು, ಪ್ರಭು ಶಾಸ್ತ್ರೀ, ಶರಣಬಸವ ಹಿರೇಮಠ, ಎಂ.ಮಂಜುನಾಥ್ ಸ್ವಾಮಿ, ಬಸವರಾಜ ಸ್ವಾಮಿ ಹಿರೇಮಠ, ಶರಣಬಸವ ಸ್ವಾಮಿ ನಂದಿಮಠ, ರೇಣುಕಾಸ್ವಾಮಿ, ಶರಣಯ್ಯ ಸ್ವಾಮಿ, ಅಮರೇಶ ಸ್ವಾಮಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಸಭೆಯಲ್ಲಿ ಇದ್ದರು.